# 1000 ಕನ್ನಡ ಗಾದೆಗಳು Pdf - KannadaPdf.com

1. ಬಂದದ್ದೆಲ್ಲಾ ಬರಲಿ ಗೋವಿಂದನ ದಯೆಯೊಂದಿರಲಿ
2. ಬಡವ ನೀ ಮಡಗಿದ ಹಾಗಿರು
3. ಬಡವನ ಕೋಪ ದವಡೆಗೆ ಮೂಲ
4. ಪಾಪಿ ಸಮುದ್ರ ಹೊಕ್ಕರೂ ಮೊಳಕಾಲುದ್ದ ನೀರು
5. ಪಾಲಿಗೆ ಬಂದದ್ದೆ ಪರಮಾನ್ನ .
6. ಪೀತಾಂಬರ ಉಟ್ಟರೂ ಕೊತ್ತಂಬರಿ ಮಾರೋದು ತಪ್ಪಲಿಲ್ಲ
7. ಪುರಾಣ ಹೇಳೊಕೆ ; ಬದನೆಕಾಯಿ ತಿನ್ನೋಕೆ
8. ನಮ್ಮ ದೇವರ ಸತ್ಯ ನಮಗೆ ಗೊತ್ತು
9. ದಡ್ಡ ಮನುಷ್ಯ ನೆಲಕ್ಕೆ ಭಾರ , ಅನ್ನಕ್ಕೆ ಖಾರ
10. ದಡನಿಗೆ ಹಗಲು ಕಳೆಯುವುದಿಲ್ಲ , ಒಳ್ಳೆಯವನಿಗೆ ರಾತ್ರಿ ಸಾಲುವುದಿಲ್ಲ
11. ದಾನವಾಗಿ ಸಿಕ್ಕಿದರೆ , ನನಗೆ ಒಂದಿರಲಿ ನಮ್ಮಪ್ಪನಿಗೆ ಒಂದಿರಲಿ
12. ದಾರಿಯಲ್ಲಿ ಹೋಗುತ್ತಿದ್ದ ಮಾರಿಯನ್ನು ಕರೆದು ಮನೆಗೆ ಸೇರಿಸಿಕೊಂಡಂತೆ
13. ದುಡಿಮೆಯೇ ದುಡ್ಡಿನ ತಾಯಿ  ದುಡಿಮೆಯೇ ದೇವರು
14. ತನ್ನ ಓಣೀಲಿ ನಾಯಿಯೇ ಸಿಂಹ ತ ತನ್ನ ಮೊಸರನ್ನು ಯಾರೂ ಹುಳಿ ಅನ್ನುವುದಿಲ್ಲ .
15. ತನ್ನೂರಲಿ ರಂಗ , ಪರೂರಲಿ ಮಂಗ
16. ತಮ್ಮನೇಲಿ ಹಗ್ಗಣ ಸತ್ತು ಬಿದ್ದಿದ್ದರೂ ಬೇರೇ ಮನೇ ಸತ್ತ ನೊಣದ ಕಡೆಗೆ ಬೆಟ್ಟು
17. ಉಗಮವಾಗದಿರಲಿ ಹಿಂಸೆ , ಹೆಚ್ಚಿಗೆಯಾಗದಿರಲಿ ಆಸೆ
18. ಉಗಿದರೆ ತುಪ್ಪ ಕೆಡುತ್ತದೆ , ನುಂಗಿದರೆ ಗಂಟಲು ಕೆಡುತ್ತದೆ
19. ಉಗುರಿನಲ್ಲಿ ಹೋಗೋ ಚಿಗುರಿಗೆ ಕೊಡಲಿ ಏಕೆ ?
20. ಉಡೋಕೆ ಇಲ್ಲದವ ಮೈಲಿಗೆಗೆ ಹೇಸ , ಉಂಬೋಕೆ ಇಲ್ಲದವ ಎಂಜಲಿಗೆ ಹೇಸ
21. ಉತ್ತಮ ಹೊಲ ಮಧ್ಯಮ ವ್ಯಾಪಾರ ಕನಿಷ್ಠ ಚಾಕರಿ
22. ಅಡವಿಯ ದೊಣ್ಣೆ ಪರದೇಸಿಯ ತಲೆ
23. ಅಡಿಕೆಗೆ ಹೋದ ಮಾನ ಆನೆ ಕೊಟ್ಟರು ಬರಲ್ಲ .
24. ಅಡಿಗೆ ಬಿದ್ದರೂ ಮೀಸೆ ಮೇಲೆ
25. ಅಡ್ಡಗೋಡೆಯ ಮೇಲೆ ದೀಪ ಇಟ್ಟ ಹಾಗೆ .
26. ಅತ್ತೆಗೊಂದು ಕಾಲ , ಸೊಸೆಗೊಂದು ಕಾಲ
27. ಅನ್ನ ಇಕ್ಕಿ ಸಾಕು ಅನ್ನಿಸ ಬಹುದು , ದುಡ್ಡು ಕೊಟ್ಟು ಸಾಕು ಅನ್ನಿಸೋಕಾಗಲ್ಲ
28. ಅನ್ನ ಹಾಕಿದ ಮನೆಗೆ ಕನ್ನ ಹಕಬೇಡ
29. ಅನ್ಯಾಯದಿಂದ ಗಳಿಸಿದ್ದು ಅಸಡ್ಡಾಳಾಗಿ ಹೋಯ್ತು
30. ಅಪ್ಪಂತೋನಿಗೆ ಇಪ್ಪತ್ತೊಂದು ಕಾಯಿಲೆ
31. ಹೊರೆ ಹೊತ್ತುಕೊಂಡು ಗ್ರಹಗತಿ ಕೇಳ್ತಂದೆ
32. ಹೊಳೆಗೆ ಸುರಿದರೂ ಅಳೆದು ಸುರಿ
33. ಹೊಳೆಯಲ್ಲಿಹುಣಿಸೇ ಹಣ್ಣು ಕಿವಿಚಿದಂತೆ



| Download: Kannadapdf.com | https://kannadapdf.com/ |
|---|---|

34. ಹೊಳೆಯುವುದೆಲ್ಲಾ ಚಿನ್ನವಲ್ಲಹೊಟ್ಟೆ ತುಂಬಿದೋರಿಗೆ ಹುಡುಗಾಟ , ಹೊಟ್ಟೆಗಿಲ್ಲದೋರಿಗೆ ಮಿಡುಕಾಟ
35. ಹೊಟ್ಟೆಗೆ ಹಿಟ್ಟಿಲ್ಲದಿದ್ದರೂ ಜುಟ್ಟಿಗೆ ಮಲ್ಲಿಗೆ ಹೂವು
36. ಹೊತ್ತಿಗಿಲ್ಲದ ಗಾದೆ , ಊಟಕ್ಕಿಲ್ಲದ ಉಪ್ಪಿನಕಾಯಿಯಂತೆ
37. ಹೊರಗೆ ಥಳುಕು , ಒಳಗೆ ಹುಳುಕು
38. ಹುಚ್ಚರ ಮದುವೆಯಲ್ಲಿ ಉಂಡವನೇ ಜಾಣ
39. ಹುಟ್ಟಿದ ಮಗು ತರುವುದು ತೊಟ್ಟಲಿಗೆ ನಗು
40. ಹುಟ್ಟಿದ ಮನೆ ಹೋಳಿಹುಣ್ಣಿಮೆ ಕೊಟ್ಟ ಮನೆ ಶಿವರಾತ್ರಿ
41. ಹುಟ್ಟಿದಾಗ ಬಂದದ್ದು ಹೂತಾಗ ಹೋದೀತೇನು
42. ಹುಟ್ಟು ಗುಣ ಸುಟ್ಟರೂ ಹೊಗೊದಿಲ್ಲ
43. ಸಂತೆ ಕಟ್ಟೋಕು ಮೊದಲೇ ಸೇರಿದರು ಗಂಟು ಕಳ್ಳರು
44. ಸಂತೆ ಹೊತ್ತಿಗೆ ಮೂರು ಮೊಳ ನೇದ ಹಾಗೆ
45. ಸಂತೇಲಿ ಮಂತ್ರ ಹೇಳಿದಂಗೆ
46. ಸಂತೇಲಿ ಮಂತ್ರ ಹೇಳಿದಂಗೆ ಸಂದೀಲಿ ಸಮಾರಾಧನೆ ಮಾಡ್ದಂಗೆ
47. ಹುಚ್ಚುಮುಂಡೆ ಮದುವೇಲಿ ಉಂಡವನೇ ಜಾಣ
48. ವ್ಯಾಪಾರಕ್ಕೆ ನಿಮಿಷ ಬೇಸಾಯಕ್ಕೆ ವರುಷ
49. ಶರಣರ ಬದುಕನ್ನು ಅವರ ಮರಣದಲ್ಲಿ ನೋಡು
50. ಶರೀರಕ್ಕೆ ಸುಖ , ಹೊಟ್ಟೆಗೆ ದುಃಖ
51. ಶಸ್ತ್ರದಿಂದಾದ ಗಾಯ ಮಾಯುತ್ತದೆ , ನಾಲಿಗೆಯಿಂದಾದ ಗಾಯ ಮಾಯುವುದಿಲ್ಲ
52. ಶಿವ ಪೂಜೇಲಿ ಕರಡಿ ಬಿಟ್ಟಂಗೆ
53. ಶಿವರಾತ್ರಿ ಮನೆಗೆ ಏಕಾದಶಿ ಬಂದಂಗೆ
54. ಲಾಭ ನೋಡಿ ಬಾಳೆ ಹಣ್ಣು ತಿಂದಂತೆ
55. ಲಾಭವಿಲ್ಲದ ವ್ಯಾಪಾರ ಕತ್ತೆ ಮೈ ಪರಚಿದಂಗೆ
56. ಲಿಂಗ ಹರಿದ ಮೇಲೆ ಜಂಗಮನ ಹಂಗೇನು
57. ಲೋಕ ತಿಳಿಯಬೇಕು ಲೆಕ್ಕ ಕಲಿಯಬೇಕು
58. ವಶಗೆಡದೆ ಹಸಗೆಡಲ್ಲ
59. ರಾಮೇಶ್ವರಕ್ಕೆ ಹೋದ್ರೂ ಶನೇಶ್ವರನ ಕಾಟ ತಪ್ಪಲಿಲ್ಲ
60. ರಾಮೇಶ್ವರಕ್ಕೆ ಹೋದರೂ ಶನೇಶ್ವರನ ಕಾಟ ತಪ್ಪಲಿಲ್ಲ
61. ರಾವಣನ ಮಾತಿಗೆ ಮನಸೋತವ , ರಾಮನ ಮಾತಿಗೆ ಜಾಣನಾಗುವನೇ ?
62. ಗೋಂಡಿಗೆ ಏಟು ಬಿದೆ ವೆಂಡಿಗೆ ಮೂಲಾಮು
63. ರಸ ಬೆಳೆದು ಕಸ ತಿನ್ನಬೇಡ , ಹಸ ಕಟ್ಟಿ ಮೊಸರಿಗೆ ಪರದಾಡಬೇಡ
64. ರಾಗ ನೆನಪಾದಾಗ ತಾಳ ಮರೆತು ಹೋಯಿತಂತೆ
65. ರಾಗಿ ಇದ್ರೆ ರಾಗ ರಾಗಿ ಇಲ್ಲಿದೆ ರೋಗ
66. ರಾಗಿಕಲ್ಲು ತಿರುಗುವಾಗ ರಾಜ್ಯವೆಲ್ಲಾ ನೆಂಟರು

67. ರಾಜ ಇರೋತನಕ ರಾಣಿ ಭೋಗ
68. ರಾತ್ರಿ ಕಂಡ ಬಾವೀಲಿ ಹಗಲು ಬಿದ್ದಂಗೆ
69.

# ಕನ್ನಡ 1 ಸಾವಿರ ಗಾದೆಗಳು

ಅತ್ತೆಗೊಂದು ಕಾಲ; ಸೊಸೆಗೊಂದು ಕಾಲ

ಹಲ್ಲಿದ್ದವನಿಗೆ ಕಡಲೆ ಇಲ್ಲ, ಕಡಲೆಯಿದ್ದವನಿಗೆ ಹಲ್ಲಿಲ್ಲ.

ಭಲೆ ಜಟ್ಟಿ ಅಂದ್ರೆ ಕೆಮ್ಮಣ್ಣು ಮುಕ್ಕಿದ

ನಾಯಿ ಬೊಗಳಿದರೆ ದೇವಲೋಕ ಹಾಳಾಗುತ್ಯೇ ?

ಕದ್ದು ತಿಂದ ಹಣ್ಣು, ಪಕ್ಕದ ಮನೆ ಊಟ ಎಂದೂ ಹೆಚ್ಚು ರುಚಿ

ಹಂಗಿನ ಅರಮನೆಗಿಂತಾ ಗುಡಿಸಿಲೇ ಮೇಲು

ತಾ ಕಳ್ಳೆ ಪರರ ನಂಬಳು, ಹಾದರಗಿತ್ತಿ ಗಂಡನ ನಂಬಳು

ಅಡಿಕೆಗೆ ಹೋದ ಮಾನ ಆನೆ ಕೊಟ್ಟರು ಬರಲ್ಲ.

ಕಾಲಕ್ಕೆ ತಕ್ಕಂತೆ ನಡಿಯಬೇಕು, ತಾಳಕ್ಕೆ ತಕ್ಕಂತೆ ಕುಣಿಯಬೇಕು

ರಾವಣನ ಹೊಟ್ಟೆಗೆ ಅರೆಕಾಸಿನ ಮಜ್ಜಿಗೆ

ಉಂಬಾಗ ಉಡುವಾಗ ಊರೆಲ್ಲ ನೆಂಟರು

ಹಾರೋ ಹಕ್ಕಿಗೆ ಹಾದರ ಕಟ್ಟಿದರು.

ಪ್ರಸ್ತಕ್ಕಿಲ್ಲದ ಮಾತು ಹತ್ತುಸಾವಿರವಿದ್ದೇನು

ತುತ್ತು ತೂಕ ಕೆಡಿಸಿತು, ಕುತ್ತು ಜೀವ ಕೆಡಿಸಿತು

| | |
|---|---|
| **Download**: Kannadapdf.com | https://kannadapdf.com/ |

ಹೊಟ್ಟೆ ತುಂಬಿದ ಮೇಲೆ ಹುಗ್ಗಿ ಮುಳ್ಳು ಮುಳ್ಳು

ಊರೇ ಕೊಳ್ಳೆ ಹೊಡೆದ ಮೇಲೆ ಕೋಟೆ ಬಾಗಿಲು ಮುಚ್ಚಿದಂತೆ.

ಕೃಷಿತೋನಾಸ್ತಿ ದುರ್ಭಿಕ್ಷಂ (ಸಂಸ್ಕೃತ)

ಹಸಿದ ಹೊಟ್ಟೆ ತೋರಿಸಿದರೆ ಮಸೆದ ಕತ್ತಿ ತೋರಿಸಿದರು

ಚಟ್ಟಿದಿನ ಬಿಟ್ಟಿಗೂ ಹೋಗಬೇಡ

ಯಾರಿಗೂ ತೋರದಂತೆ ದೈವ ತನ್ನೊಳಗೆ ಸಾರಿಹುದು

ದೂರದ ಬೆಟ್ಟ ಕಣ್ಣಿಗೆ ನುಣ್ಣಗೆ.

ಛತ್ರದಲ್ಲಿ ಊಟ ಮಠದಲ್ಲಿ ನಿದ್ರೆ

ತಿಪ್ಪಯ್ಯಗೆ ಸೂಜಿ ಮೇಲು ಕಳ್ಳಗೆ ಬಾಯಿ ಮೇಲು

ತಾರೇ ಬಡ್ಡೀ ನೀರಾ ಅಂದ್ರೆ ತರುವೆನು ನಿಲ್ಲೊ ತಿರುಕ ಮುರವ

ಊಟ ಬಲ್ಲವನಿಗೆ ರೋಗವಿಲ್ಲ, ಮಾತು ಬಲ್ಲವನಿಗೆ ಜಗಳವಿಲ್ಲ

ಮುಸುಕಿನೊಳಗೆ ಗುದ್ದಿಸಿಕೊಂಡಂತೆ

ತಿವಾಸಿ ಯಾತಕ್ಕೆ ತಿಪ್ಪೇ ಮೇಲಣವಗೆ

ಸತ್ತೋರ ಮಕ್ಕಳು ಇದ್ದೋರ ಕಾಲ್ದಸೀಲಿ

ತನ್ನ ಕಾಲಿಗೆ ತಾನೇ ಶರಣು ಮಾಡಿ ಹರಸಿಕೊಂಡ ಹಾಗೆ

ಉಚ್ಚೆ ಕುಡಿದರೂ ತನ್ನಿಚ್ಚೇಲಿರಬೇಕು

ನಿಷ್ಠೆ ಇದ್ದಲ್ಲಿ ದೈವ ಕಲ್ಲುಗುಂಡೊಳಗೆ ಅಡಗಿತ್ತು

ಮನೆ ಮಗ ಉಂಡಷ್ಟೂ ಒಳ್ಳೇದು, ಮಗೆ ಮಳೆ ಬಂದಷ್ಟೂ ಒಳ್ಳೇದು.

ಹನುಮಂತಾನೆ ಬಾಲ ಕಡಿತಿರುವಾಗ, ಇವನ್ಯಾವನೋ ಶಾವಿಗೆ ಕೇಳಿದನಂತೆ.

ವ್ರತ ಕೆಟ್ಟರೂ ಸುಖ ಪಡಬೇಕು

ಚಿತ್ತದ ಕಳವಳ ನಿಲ್ಲಿಸಿದವರೇ ಉತ್ತಮರು

ಸಂತೆ ಕಟ್ಟೋಕು ಮೊದಲೇ ಸೇರಿದರು ಗಂಟು ಕಳ್ಳರು

ಹನಿಹನಿಗೂಡಿದರೆ ಹಳ್ಳ; ತೆನೆತೆನೆಗೂಡಿದರೆ ಬಳ್ಳ

ಅನುಕೂಲ ಸಿಂಧು; ಅಭಾವ ವೈರಾಗ್ಯ

ತೋಟದ ಬೇಲಿಯನ್ನು ದಾಟಿ ನೋಡದವರಾರು

ಆರು ಕೊಟ್ಟರೆ ಅತ್ತೆ ಕಡೆ, ಮೂರು ಕೊಟ್ಟರೆ ಸೊಸೆ ಕಡೆ

ಪೂರ್ವಾಷಾಢ-ಉತ್ತರಾಷಾಢ ಬೇಡವೇ ಬೇಡ.

ಬೋನದ ಬುತ್ತಿ ತಪ್ಪಿ ಚಿತ್ತವಲ್ಲಭೆಯನ್ನು ಮರೆಸಿತ್ತು

ನೆಂಟರಿಗೆ ದೂರ ; ನೀರಿಗೆ ಹತ್ತಿರ

ಆಡಿ ಉಂಡ ಮೈ ಅಟ್ಟು ಉಂಡೀತೇ?

ತಾಗದೆ ಬಾಗದು ಬಿಸಿಯಾಗದೆ ಬೆಣ್ಣೆ ಕರಗದು

ಹಾರುವರ ಮೋರೆಯಾದರೂ ನೀರಿನಲ್ಲಿ ತೊಳೆಯದಿದ್ದರೆ ನಾರದೆ ಇದ್ದೀತೆ.

ಒಂದೊಂದು ಹನಿ ಬಿದ್ದು ನಿಂತಲ್ಲಿ ಮಡುವಾಯ್ತು

ಎಲ್ಲಾ ಜಾಣ,ತುಸಾ ಕೋಣ.

ಓದಿ ಓದಿ ಮರುಳಾದ ಕೂಚು ಭಟ್ಟ

ರೊಟ್ಟಿ ಜಾರಿ ತುಪ್ಪಕ್ಕೆ ಬಿದ್ದಂತೆ

ತರುಬು ಇದ್ದರೆ ಹರುಬು ನಿಂತೀತೇ

ಹಳೆ ಚಪ್ಪಲಿ, ಹೊಸಾ ಹೆಂಡತಿ ಕಚ್ಚೊಲ್ಲ

ಹತ್ತು ಮಂದಿ ಹುಲ್ಲು ಕಡ್ಡಿ ಒಬ್ಬನ ತಲೆ ಭಾರ

ಭಂಗಿ ದೇವರಿಗೆ ಹೆಂಡಗುಡುಕ ಪೂಜಾರಿ

| | |
|---|---|
| **Download**: Kannadapdf.com | https://kannadapdf.com/ |

ತಮ್ಮ ಸಂಗಡ ತಂಗಿಯ ಗಂಡ ದೂರು ಹೇಳಿದರೆ ನಿನಗೇನಪ್ಪ

ತಾ ಕಾಣದ ದೇವರು ಪೂಜಾರಿಗೆ ವರ ಕೊಟ್ಟೀತೇ?

ವಿನಯದಿಂದ ವಿಶ್ವವನ್ನು ಗೆಲ್ಲು, ಪರನಿಂದೆ ಮಹಾಪಾಪ.

ಅಳಿಯನ ಕುರುಡು ಬೆಳಗಾದರೆ ಗೊತ್ತಾಗತ್ತೆ

ಕೂಳಿಗೆ ಕೇಡು ಭೂಮಿಗೆ ಭಾರ

ತಾಯೀನೇ ತಿಂದೋಳು,ಅತ್ತೇನ ಬಿಟ್ಟಾಳೆಯೇ?

ಟೊಣಪೆ ಶಾಸ್ತ್ರಕ್ಕೆ ಹೆಣಗುವುದೇ ಅರ್ಥ

ಇಮ್ಮನದಿಂದ ಸುಮ್ಮನೆ ಕೆಟ್ಟೆ (ಕೇಡು)

ಮೊದಲಿದ್ದವಳೇ ವಾಸಿ ಎಬ್ಬಿಸಿದರೆ ಉಣ್ಣೋಳು

ನೆತ್ತರು ಉಕ್ಕಿದರೆ ಜೀವ ತೊಡಕೀತು

ಬಂದ ದಾರಿಗೆ ಸುಂಕವಿಲ್ಲ

ಸಂಕೋಚ ಮಾಡಿದರೆ ಸಂಕಪಾಷಾಣವೂ ಸಿಗದು.

ತಾನು ಸಾಯುವ ತನಕ ತನ್ನನ್ನು ಜೋಪಾನ ಮಾಡಿದರೆ ತತ್ತಿಯಷ್ಟು ಬಂಗಾರ ಕೊಟ್ಟೇನು ಅನ್ನುತ್ತಂತೆ ಕೋಳಿ.

ಮಾತು ಮನೆ ಮುರಿತು, ತೂತು ಓಲೆ ಕೆಡಿಸಿತು.

ನಾ ಬಲ್ಲೆ ಅನ್ನೊ ಮಾತು ಎಲ್ಲರಿಗು ಸಲ್ಲದು

ಮಾತು ಬೆಳ್ಳಿ, ಮೌನ ಬಂಗಾರ.

ನಗೋ ಗಂಡಸನ್ನೂ ಅಳೋ ಹೆಂಗಸನ್ನೂ ನಂಬಬೇಡ

ತಿಳಿದವ ಮಾಡ್ಯಾನು ನಳಪಾಕವ

ಕದ್ದ ರೊಟ್ಟಿ ಬೇರೆ ದೇವರ ಪ್ರಸಾದ ಬೇರೆ.



| | |
|---|---|
| **Download**: Kannadapdf.com | https://kannadapdf.com/ |

ಹಾರ್‍ಸೋನೋ ತೀರ್‍ಸೋನೋ.

ಒಂಡಂಬಡಿಕೆ ಇಂದ ಆಗದು ದಡಂಬಡಿಕೆ ಇಂದ ಆದೀತೇ

ಬೆರಳು ತೋರಿಸಿದರೆ ಹಸ್ತ ನುಂಗಿದನಂತೆ.

ಸಮತೆ ತೊಟ್ಟು(=ಧರಿಸಿ) ಪದವಿ ಮುಟ್ಟು

ಸಾಯೋ ಮುಂದೆ ಸಕ್ಕರೆ ತುಪ್ಪ ತಿನಿಸಿದರಂತೆ

ಖೀರು ಕುಡಿದವ ಓಡಿಹೋದ, ನೀರು ಕುಡಿದವ ಸಿಕ್ಕಿಬಿದ್ದ.

ಕಂತೆಗೆ ತಕ್ಕ ಬೊಂತೆ.

ಆಕಳು ದಾನಕ್ಕೆ ಕೊಟ್ರೆ, ಹಲ್ಲು ಹಿಡಿದು ನೊಡಿದ್ರಂತೆ.

ತಾಯಿಯ ಪ್ರೀತಿ ಸುಖವಾದದ್ದು, ತಂದೆಯ ಪ್ರೀತಿ ಮಧುರವಾದದ್ದು.

ಡಾವರ (=ನೀರಡಿಕೆ) ಹತ್ತಿದಾಗ ದೇವರ ಧ್ಯಾನ

ಚೆನ್ನಿದ್ದೋರ ತೊನ್ನು ಮುಚ್ತದೆ.

ಆಕಳಿದ್ದವನಿಗೆ ವ್ಯಾಕುಲವಿಲ್ಲ. ಅಕ್ಕಿ ತಿಂದವರಿಗೆ ಅನ್ನಿಲ್ಲ,

ಇಷ್ಟನ್ನು ಕಂಡೆಯಾ ಕೃಷ್ಣಂಭಟ್ಟಾ ಅಂದರೆ,ಮುಪ್ಪಿನ ಕಾಲಕ್ಕೆ ಮೂರು ಜನ ಹೆಂಡಿರು

ಕೆಲಸವಿಲ್ಲದ ಬಡಗಿ ಮಗುವಿನ ಕುಂಡೆ ಕೆತ್ತಿದನಂತೆ.

ಆರು ದೋಸೆ ಕೊಟ್ರೆ ಅತ್ತೆ ಕಡೆ, ಮೂರು ದೋಸೆ ಕೊಟ್ರೆ ಸೊಸೆ ಕಡೆ

ಮುದ್ದೆ ಉಣ್ತಾ ಮಜ್ಜಿಗೆ ಓಡಾಟ

ದುಷ್ಟರ ಕಂಡರೆ ದೂರ ಇರು.

ಅಜ್ಜಿಗೆ ಅರಿವೆ ಚಿಂತೆ ಮೊಮ್ಮಗಳಿಗೆ ಮಿಂ..ನ ಚಿಂತೆ

ಹುಟ್ಟಿದ ಮಗು ತರುವುದು ತೊಟ್ಟಲಿಗೆ ನಗು.

ಅಣ್ಣಿಗೇರ್‍ಯಾಗ ಎಣ್ಣೆ ಮೊಣಕಾಲ ಮಟ್ಟ

ಆಗುವ ವರೆಗಿದ್ದು ಆರುವ ವರೆಗೆ ಇರಲಾರರೇ

ಮನೆ ತುಂಬ ಮುತ್ತಿದ್ದರೆ ...ಗೂ ಪೋಣಿಸಿಕೊಂಡರಂತೆ

ತನಗೇ ಜಾಗವಿಲ್ಲ. ಕೊರಳಲ್ಲಿ ಡೋಲು ಬೇರೆ.

ಚೇಳಿಗೆ ಪಾರುಪತ್ಯ ಕೊಟ್ಟ ಹಾಗೆ

ಸದಾಚಾರಣೆಯ ಉದಾಹರಣೆಯೇ ಉತ್ತಮವಾದ ಉಪದೇಶ.

ಅರವತ್ತಕ್ಕೆ ಅರಳು ಮರಳು

ಹೊತ್ತಿರುವಾಗಲೇ ಗೊತ್ತು ಸೇರಬೇಕು

ನಾಯಿ ಬೊಗಳಿದರೆ ದೇವಲೋಕ ಹಾಳೇನು

ಕಾಲಿಗೆ ಬಿದ್ದು ಕಾಲುಂಗರ ಉಚ್ಚಿಕೊಂಡರಂತೆ

ಯಸಗಾತಿಗೆ ದೋಸೆ ಕೊಡೊ ಹೊತ್ತಿಗೆ, ಮೂಸಿಮೂಸಿ ಮೂಗಿನ ಕೆಳಗೆ ಹಾಕಿದ್ಲು

ಇಟ್ಟ ವಿಭೂತಿ ಪಟ್ಟದಂತೆ ಇಟ್ಟ ವಿಭೂತಿ ಅಳಿದರೆ ಚಟ್ಟ ಹತ್ತಿದಂತೆ

ಅಂಗೈ ಹುಣ್ಣಿಗೆ ಕನ್ನಡಿ ಯಾಕೆ

ಕಾಡಿಗೆ ಗಣ್ಣ ಚೆಲುವೆ ಮನೆಗೆ ಕೇಡು ತಂದಳು

ಹಾಯೋ ಎತ್ತು ಹಾಯ್ದರೂ ಬಂತು ಬಿಟ್ಟರೂ ಬಂತು

ನವಿಲನ್ನು ನೋಡಿ ಕೆಂಬೂತ ಪುಕ್ಕ ಕೆದರಿತಂತೆ

ಮಂತ್ರಕ್ಕಿಂತ ಉಗುಳೇ ಜಾಸ್ತಿ.

ಮುತ್ತು ಚಿಪ್ಪಲ್ಲಿ ಹುಟ್ಟಿ ಮುಕುಟದ ಮಣಿಯಾಯ್ತು

ಪಾಲಿಗೆ ಬಂದದ್ದೆ ಪರಮಾನ್ನ.

ಊರಿಗೆ ದೊರೆ ಆದರೂ ತಾಯಿಗೆ ಮಗನೆ.

ಆಸೆಗೆ ಕೊನೆಯಿಲ್ಲ



| | |
|---|---|
| **Download**: Kannadapdf.com | https://kannadapdf.com/ |

ತನಗೆ ಇಲ್ಲದ ಮಾರಿ ತಮ್ಮಡಿಗೆ (ತಮ್ಮಡಯ್ಯನಿಗೆ) ವರಾ ಕೊಟ್ಟೀತೇ?

ಲಂಘನಮ್ ಪರಮೌಷಧಮ್

ಅಲ್ಪನಿಗೆ ಐಶ್ವರ್ಯ ಬಂದ್ರೆ ಅರ್ಧ ರಾತ್ರೀಲಿ ಕೊಡೆ ಹಿಡಿದನಂತೆ

ಎಂಥೆಂಥ ದೇವರಿಗೇ ಅಂತರಾಟ ಆಗಿರುವಾಗ ಕಾಲ್ಮುರುಕ ದೇವರಿಗೆ ಕೈಲಾಸವೇ

ಹಿತ್ತಿಲ ಗಿಡ ಮದ್ದಲ್ಲ

ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ.

ಸ್ತ್ರೀ ರೂಪವೇ ರೂಪ, ಶೃಂಗಾರವೇ ರಸ

ತಾತಾಚಾರ್ಯರ ಮನೆಗೆ ಏನಪ್ಪಣೆ?

ಇತ್ತಿತ್ತ ಬಾ ಅಂದ್ರೆ ಇದ್ದ ಮನೇನೂ ಕಿತ್ತುಕೊಂಡ

ಜಲ ಶೋಧಿಸಿ ನೀರು ತರ್ಬೇಕು, ಕುಲ ಶೋಧಿಸಿ ಹೆಣ್ಣು ತರ್ಬೇಕು.

ಬಂಧುಗಳಿಲ್ಲದಿರೊ ಬಡತನ ಎಂದಿಗೂ ಬೇಡ

ಒಲ್ಲದ ಗಂಡನಿಗೆ ಮೊಸರಲ್ಲೂ ಕಲ್ಲು

ತುಪ್ಪತೊಗೆ ತಿನ್ನೋರ ರಂಪ ನೋಡು

ಆರಿದ್ರಾ ಮಳೆ ಆರದೇ ಹುಯ್ಯುತ್ತೆ.

ಉಣವಲ್ಲ ಉಡವಲ್ಲದವನ ಒಡವೆ ಕಂಡವರ ಪಾಲಾಯ್ತು

ಅಳಿವುದೇ ಕಾಯ ಉಳಿವುದೇ ಕೀರ್ತಿ

ಎಣ್ಣೆ ಬಂದಾಗ ಕಣ್ಣು ಮುಚ್ಚಿಕೊಂಡರು

ಒಲ್ಲದ ಗಂಡನಿಗೆ ಮೊಸರಲ್ಲೂ ಕಲ್ಲು.

ಬಳ್ಳಿಗೆ ಕಾಯಿ ಭಾರವೇ

ನೀಡುವವ ಉತ್ತಮ ಬೇಡಿದರೂ ನೀಡದವ ಅಧಮ

| | |
|---|---|
| **Download**: Kannadapdf.com | https://kannadapdf.com/ |

ಹತ್ತರೊಟ್ಟಿಗೆ ಹನ್ನೊಂದು ಜಾತ್ರೆಯೊಟ್ಟಿಗೆ ಗೋವಿಂದು

ಕೃತಿ ಇಲ್ಲದ ಮಾತು ಕಸ ಬೆಳೆದ ತೋಟವಿದ್ದಂತೆ.

ನಾಯಿಯನ್ನು ಹೊಡೆಯಲು ಬಣ್ಣದ ಕೋಲೇ ?

ದೊಡ್ಡವರು ಹೇಳಿದ ಹಾಗೆ ಮಾಡು; ಮಾಡಿದ ಹಾಗೆ ಮಾಡಬೇಡ

ಗಿಡವಾಗಿ ಬಗ್ಗದ್ದು, ಮರವಾಗಿ ಬಗ್ಗೀತೇ?

ಅರಮನೆಯ ಮುಂದಿರಬೇಡ, ಕುದರೆಯ ಹಿಂದಿರಬೇಡ

ಹಾಲಿದ್ದಾಗ ಹಬ್ಬ ;ನೀರಿದ್ದಾಗ ನೇಮ

ಸಮಯಕ್ಕಿಲ್ಲದ ನೆರವು ಸಾವಿರ ಇದ್ದರೂ ಎರವು (ಅನ್ಯ)

ಹುಬ್ಬೆ ಮಳೇಲಿ ಬಿತ್ತಿದರೆ ಹುಲ್ಲೂ ಇಲ್ಲ ಕಾಳೂ ಇಲ್ಲ

ಮಾನಿಷ್ಟರು ಮಾನಕ್ಕೆ ಅಂಜಿದರೆ ಮಾನಗೇಡಿ ತನಗೇ ಅಂಜಿದರು ಅಂದನಂತೆ

ಉತ್ತರೆ ಹೊಲ ಚಂದ ಬಿತ್ತರೆ ಬೆಳೆ ಚಂದ

ನಾಳೆ ಎಂದವನಿಗೆ ಹಾಳು, ಇಂದೇ ಎಂದವನಿಗೆ ಬೀಳಾಗದು ಬಾಳು.

ಕೋಣನ ಮುಂದೆ ಕಿನ್ನರಿ ಬಾರಿಸಿದ ಹಾಗೆ.

ಹುಟ್ಟಿದವಗೆ ಸಾವು ತಪ್ಪದು

ತಕ್ಕಡಿ ಸ್ವರೂಪ ತಕ್ಕವನೇ ಬಲ್ಲ

ಎದ್ದೋಗೋ ಮಾತು ಬಿದ್ದೋಗಲಿ

ತವಡು ತಿಂದರು ಮುರುಕು (ಬೆಡಗು, ಕೊಂಕು) ಘನ

ಕುಲಗೇಡಿ ಮಗ ಹುಟ್ಟಿ ಕುಲಕ್ಕೇ ಮಸಿ ಬಳಿದ

ಅಂಜುತ್ತಾ ಅಳುಕುತ್ತಾ ತಿಂದ ಅಮೃತ ನಂಜು

ಕೆಲಸಿಲ್ಲದ ಗಂಡು ಕರೀ ಒನಕೆ ತುಂಡು



| | |
|---|---|
| **Download**: Kannadapdf.com | https://kannadapdf.com/ |

# 1000 ಕನ್ನಡ ಗಾದೆಗಳು Pdf - KannadaPdf.com

ಕೋಳಿಕಾಲಿಗೆ ಗೆಜ್ಜೆ ಕಟ್ಟಿದರೆ ತಿಪ್ಪೆ ಕೆರೆಯದೆ ಇರುವುದೇ?

ಆನೆ ಮೆಟ್ಟಿದ್ದೇ ಸಂದು, ಸೆಟ್ಟಿ ಕಟ್ಟಿದ್ದೇ ಪಟ್ಟಣ

ಊರು ಹೋಗು ಅನ್ನುತ್ತೆ, ಕಾಡು ಬಾ ಅನ್ನುತ್ತೆ.

ಕೋಣನ ಮುಂದೆ ಕಿನ್ನರಿ ಬಾರಿಸಿದಂತೆ

ಓಲೆ ಆಸೆಗೆ ಬೆಕ್ಕು ಮೂಗುತಿ ಕಳಕೊಂಡಿತು

ಅಕ್ಕಿ ಉಂಡವ ಹಕ್ಕಿ, ಜೋಳ ಉಂಡವ ತೋಳ

ಒಕ್ಕಣ್ಣನ ರಾಜ್ಯದಲ್ಲಿ ಒಂದು ಕಣ್ಣು ಮುಚ್ಚಿಕೊಂಡು ನಡಿ

ಹಿಡಿದ ಕೆಲಸ ಕೈ ಹತ್ತಲ್ಲ, ತಿಂದ ಅನ್ನ ಮೈ ಹತ್ತಲ್ಲ

ಯಾವ ದೇವರು ವರ ಕೊಟ್ಟರೂ ಗಂಡನಿಲ್ಲದೆ ಮಕ್ಕಳಾಗದು.

ತಾ ಕಳ್ಳೆ ಪರರ ನಂಬಳು,

ಕೀಲು ಸಣ್ಣದಾದರೂ ಗಾಲಿ ನಡೆಸುತ್ತದೆ

ಸಿರಿತನ ಇರೂತನ ಹಿರಿತನ ಘನ ಸಿರಿಯಣ್ಣ

ಅತ್ತೂ ಕರೆದೂ ಔತಣ ಹೇಳಿಸಿಕೊಂಡರು

ಗಾಣವಾಡದೆ ಎಣ್ಣೆ ಬಂದೀತೇ

ಅಹಂಕಾರಕ್ಕೆ ಉದಾಸೀನವೇ ಮದ್ದು

ನೂಲಿನಂತೆ ಸೀರೆ; ತಾಯಿಯಂತೆ ಮಗಳು

ಆಟ ಕೆಟ್ಟರೆ ದೀವಟಿಗೆಯವನ ಸುತ್ತ

ಹೆಸರಿಗೆ ಹೊನ್ನ ಹೆಗ್ಗಡೆ, ಎಸರಿಗೆ ಅಕ್ಕಿ ಇಲ್ಲ

ಇದ್ದೂ ಉಣ್ಣದವನ ಬಾಯಲ್ಲಿ ಕಡೆಗೆ ಮಣ್ಣು ಬಿತ್ತು

ಉಂಬೋಕೆ ಉಡೋಕೆ ಅಣ್ಣಪ್ಪ ಕೆಲಸಕ್ಕಷ್ಟೇ ಇಲ್ಲಪ್ಪ

| | |
|---|---|
| **Download**: Kannadapdf.com | https://kannadapdf.com/ |

ಕುಂಬಾರನಿಗೆ ವರುಷ; ದೊಣ್ಣೆಗೆ ನಿಮಿಷ

ಹೂವಿನ ಜೊತೆ ದಾರ ಮುಡಿಯೇರಿತು

ಒಲ್ಲದ ಗಂಡನಿಗೆ ಮೊಸರಲ್ಲಿ ಕಲ್ಲು

ಬಡ ದೇವರನ್ನು ಕಂಡರೆ ಬಿಲ್ವಪತ್ರೇನೂ 'ಭುಸ್' ಅಂತಂತೆ

ಕೊಟ್ಟಿದ್ದು ತನಗೆ; ಬಚ್ಚಿಟ್ಟದ್ದು ಪರರಿಗೆ

ಅಕ್ಕ ಸತ್ತರೆ ಅಮಾವಾಸ್ಯೆ ನಿಲ್ಲುತ್ತದೆಯೇ **?**

ಈರಣ್ಣನ ಮುಂದೆ ಬಸ್ಸಣ್ಣ ಕುಂತಂತೆ

ಹಳೆ ಚಪ್ಪಲಿ, ಹೊಸ ಹೆಂಡತಿ ಕಚ್ಚೊಲ್ಲ

ಒಪ್ಪವಿಲ್ಲದವಳ ನಗೆ ನುಡಿ ನೋಟ ಎಂದೂ ಸಪ್ಪಗೆ

ಉಗಮವಾಗದಿರಲಿ ಹಿಂಸೆ, ಹೆಚ್ಚಿಗೆಯಾಗದಿರಲಿ ಆಸೆ.

ಮನಸ್ಸಿದ್ದರೆ ಮಾರ್ಗ

ಹುಲ್ಲಿನ ಬಣವೇಲಿ ಸೂಜಿ ಹುಡುಕಿದ ಹಾಗೆ

ಲೇ ಅನ್ನಲು ಅವಳೇ ಇಲ್ಲ ಮಗನ ಹೆಸರು ಮುದ್ದುರಂಗ.

ನಾಡೆಂದ್ರ ಕಾಡನ್ನ ಸುಡುವಾಗ ದೇವೇಂದ್ರ ಗಾಳೀನ್ನ ನೋಡೊಕೆ ಕಳಿಸಿದ

ಆಸೆ ಮಾತು ಕೊಟ್ಟು ಬಾಸೆ ತಪ್ಪಬಾರ್ದು

ಸಾವಿರ ಉಳಿ ಪೆಟ್ಟು,ಒಂದು ಚಿತ್ತಾರ

ನಾಯಿ ಹೆಸರು'ಸಂಪಿಗೆ'ಅಂತ

ಬಿಡುಕು ಮಾತಿಗೆ ಮಾಡಿಕೊಳ್ಳದಿರು ಕೆಡುಕು.

ಅನ್ನ ಹಾಕಿದ ಮನೆಗೆ ಕನ್ನ ಹಕಬೇಡ

ತರಲೆ ಕೇಳುವವ ಮರುಳಗಿಂತ ಕಡೆ

| | |
|---|---|
| **Download**: Kannadapdf.com | https://kannadapdf.com/ |

ಹೊಳೆಯುವುದೆಲ್ಲಾ ಚಿನ್ನವಲ್ಲ.

ಕೆಟ್ಟು ಪಟ್ಟಣ ಸೇರು.

ಮಮತೆಯ ಮಡಿಲಲ್ಲಿ ತೂಗಬೇಕು, ಮನಸ್ಸೆಂಬ ಬಂಧನದಲ್ಲಿ ಬೀಳಬೇಕು.

ಉಂಡ ಮನೆ ಜಂತೆ ಎಣಿಸಬಾರದು,

ತಲೇ ಸಿಡಿತಕ್ಕೆ ಮಲಶೋಧನೇ ಕೊಂಡ ಹಾಗೆ

ತಾಯಿನ್ನ ನೋಡಿ ಮಗಳನ್ನ ತಕ್ಕೋ ಹಾಲನ್ನ ನೋಡಿ ಎಮ್ಮೆನ್ನ ತಕ್ಕೋ

ಹೀನ ಸುಳಿ ಬೋಳಿಸಿದರೂ ಹೋಗೋದಿಲ್ಲ

ಬೆಕ್ಕಿಗೆ ಚೆಲ್ಲಾಟ ಇಲಿಗೆ ಪ್ರಾಣಸಂಕಟ.

ಕಂಡ ಮನೆಗೆ ಕಳ್ಳ ಬಂದ , ಉಂಡ ಮನೆಗೆ ನೆಂಟ ಬಂದ

ರಾಗ ನೆನೆಪಾದಾಗ ತಾಳ ಮರೆತು ಹೋಯಿತಂತೆ

ತಡವ ಮಾಡುವವನ ಗೊಡವೆ ಬೇಡ

ಹೇಳೋರು ಹೆಡ್ಡರಾದರೆ ,ಕೇಳೋರು ಕಿವುಡರೇ?

ಚೀಟಿ ಪಾಟಿ ಪಡಿಕಾಳಿಗೆ ಸಾಟಿಯೇ?

ಆನೆಯಂಥದೂ ಮುಗ್ಗರಿಸ್ತದೆ

ಅಕ್ಕರ ಕಲ್ತು ತನ್ನ ಒಕ್ಕಲನ್ನೇ ತಿನ್ನೊದ್ ಕಲ್ತ

ಬೆಕ್ಕು ಕಣ್ಮುಚ್ಚಿ ಹಾಲು ಕುಡಿದರೆ ಜಗತ್ತಿಗೆ ಗೊತ್ತಾಗಲ್ವಾ?

ರಾಮೆಶ್ವರಕ್ಕೆ ಹೋದ್ರೂ ಶನೀಶ್ವರನ ಕಾಟ ತಪ್ಪಲಿಲ್ಲ

ತನ್ನೂರಲಿ ರಂಗ, ಪರೂರಲಿ ಮಂಗ

ತಾಮ್ರದ ಕಾಸು ತಾಯಿ ಮಕ್ಕಳನ್ನು ಬೇರೆ ಮಾಡ್‌ತಂತೆ

ಕಂಡವರ ಕಂಡು ಕೈಕೊಂಡ ಧರ್ಮ ದಂಗು ಬಡಿಸಿತು



| | |
|---|---|
| **Download**: Kannadapdf.com | https://kannadapdf.com/ |

ಕಾಲಿದ್ದವನಿಗೆ ಆಟ, ಕಣ್ಣಿದ್ದವನಿಗೆ ನೋಟ.

ಜ್ಞಾನಿ ಬಂದರೆ ಗೌರವಿಸು, ಹೀನ ಬಂದರೆ ತ್ಯಜಿಸು.

ಮೂಗು ಹಿಡಿದರೆ ಬಾಯಿ ತಾನೇ ತೆರೆಯುವುದು

ಭಾಷೆ ತಿಳಿಯದಿದ್ದರೂ ಹಾಸ್ಯಕ್ಕೆ ಕಡಿಮೆಯಿಲ್ಲ.

ಮಳ್ಳಿ ಮಳ್ಳಿ ಮಂಚಕ್ಕೆ ಎಷ್ಟು ಕಾಲು ಎಂದರೆ, ಮೂರು ಮತ್ತೊಂದು ಅಂದಳಂತೆ.

ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಬೇಕು.

ಆಚಾರ್ಯರಿಗೆ ಮಂತ್ರಕ್ಕಿಂತ ಉಗುಳು ಜಾಸ್ತಿ

ಕೆರೆಯ ನೀರ ಕೆರೆಗೆ ಚೆಲ್ಲಿ ವರ ಪಡೆದುಕೊಂಡಂತೆ

ಸಾವಿರ ಸಲ ಗೋವಿಂದ ಅಂದರು, ಒಬ್ಬ ದಾಸಯ್ಯನಿಗೆ ಭಿಕ್ಷೆ ನೀಡಲಿಲ್ಲ

ತಿರುಪಿನಂತೆ ಇರಬೇಕು ತಿಳಿದವ

ಪಂಜರದಲ್ಲಿ ಕಾಗೆ ಇಟ್ಟರೆ ಪಂಚಮ ಸ್ವರ ಕೊಟ್ಟೀತೆ?

ಕಟ್ಟಿದ ಕೆರೆಗೆ ಕೋಡಿ ತಪ್ಪಲ್ಲ, ಹುಟ್ಟಿದ ಮನೆಗೆ ಬೇರೆ(ಪಾಲಗುವುದು) ತಪ್ಪಲ್ಲ

ಕುಂತು ತಿಂದರೆ, ಕುಡಿಕೆ ಹೊನ್ನೂ ಸಾಲದು

ಮರಗಿಣಿಯ ಕೂಡೆ ಆಡಿ ಅರಗಿಣಿ ಕೇಟ್ಟಿತು

ಮಂದ್ಯಾಗ ಮಚ್ಚೀಲೆ ಹೊಡೆದು ಸಂದ್ಯಾಗ ಕಾಲು ಹಿಡಿದರು

ಯಾರೂ ಇಲ್ಲದ ಊರಿಗೆ ಹೋಗಿ ನೀರು ಮಜ್ಜಿಗೆ ಬಯಸಿದಂತೆ

ಪಾಂಡವರು ಪಗಡೆಯಾಡಿ ಕೆಟ್ಟರು ; ಹೆಣ್ಣುಮಕ್ಕಳು ಕವಡೆಯಾಡಿ ಕೆಟ್ಟರು

ಕರುಬಿದವರ ಮನೆ ಬರಿಮನೆ

ಗಂಟೂ ಹೋಯ್ತು;ನಂಟೂ ಹೋಯ್ತು

ತನಗೆ ಇಲ್ಲದವಳು ಮಕ್ಕಳಿಗೆ ಏನು ಹೊದಿಸ್ಯಾಳು

ಕಟ್ಟಿದ ಗೂಟ , ಹಾಕಿದ ಹಲ್ಲು. ಉಂಡರೆ ಉಬ್ಬಸ, ಹಸಿದರೆ ಸಂಕಟ .

ಎದ್ದೋಗೋ ಮಾತು ಬಿದ್ದೋಗಲಿ ಆಡೋಕಾಗಲ್ಲ, ಅನುಭವಿಸಕ್ಕಾಗಲ್ಲ

ಕೇಡು ಬರೋ ಕಾಲಕ್ಕೆ ಬುದ್ಧಿಗೇಡು

ಮನಸ್ಸನ್ನು ನಿಯಂತ್ರಿಸಿ ಜೀವನ ಸಾಗಿಸಿ.

ಬೆಳ್ಳಗಿರೋದೆಲ್ಲ ಹಾಲಲ್ಲ, ಹೊಳೆಯೋದೆಲ್ಲ ಚಿನ್ನ ಅಲ್ಲ.

ಹೆತ್ತವರಿಗೆ ಅಂಬಲಿ ಬಿಡದಿದ್ದರೂ, ಹಂಬಲ ಬಿಡದಿದ್ದರೆ ಸಾಕು

ಚೆಂದಕ್ಕೆ ನನ್ನ ಗಂಡ ಚೆನವೀರಿ ಅಂದ್ರೆ ಅಂಗೆ ನನ್ನ ಜೀವ ಅರದೋಯ್ತು.

ಹೊಳೆಯಲ್ಲಿ ಹುಣಿಸೇ ಹಣ್ಣು ಕಿವಿಚಿದಂತೆ

ಕುಂಬಾರಂಗೆ ವರುಷ; ದೊಣ್ಣೆಗೆ ನಿಮಿಷ

ಹುತ್ತ ಬಡಿದರೆ ಹಾವು ಸಾಯುವುದೇ

ಶಿವಾ ಅರಿಯದ ಸಾವು ಇಲ್ಲ ಮನಾ ಅರಿಯದ ಪಾಪ ಇಲ್ಲ

ಪೀತಾಂಬರ ಉಟ್ಟರೂ ಕೊತ್ತಂಬರಿ ಮಾರೋದು ತಪ್ಪಲಿಲ್ಲ.

ಶಿವರಾತ್ರಿ ಮನೆಗೆ ಏಕಾದಶಿ ಬಂದಂಗೆ

ಹುಚ್ಚು ಹೊಳೇ ಬರುವಾಗ ಹೂವಿನ ತೋಟ ಇದಿರೇ

ತತ್ವಮಸಿ ಅಂತ ಅನ್ನೋದ್ ಕಲಿ ಅಂದ್ರೆ ತುತ್ತು ಸವಿ ಅಂತ ಉಣ್ಣೋದ್ ಕಲ್ತ

ತಲೆ ಸೀಳಿದರೆ ಎರಡಕ್ಷರ ಇಲ್ಲ

ಮಕ ನೋಡಿ ಮಾರು ಹೋದ, ಗುಣ ನೋಡಿ ದೂರ ಹೋದ

ಕನ್ನಡಿ ಒಳಗಿನ ಗಂಟು ಕೈಗೆ ದಕ್ಕೀತೆ ?

ಯಾರದ್ದೋ ದುಡ್ಡು ಎಲ್ಲಮ್ಮನ ಜಾತ್ರೆ

ಎಲ್ಲಾ ಜಾಣ; ತುಸ ಕೋಣ

ಬೆಕ್ಕಿಗೆ ಚೆಲ್ಲಾಟ: ಇಲಿಗೆ ಪ್ರಾಣಸಂಕಟ

ಹಳ್ಳೀ ದೇವರ ತಲೆ ಒಡೆದು, ದಿಲ್ಲೀ ದೇವರ ಹೊಟ್ಟೆ ಹೊರೆದ ಹಾಗೆ

ತಾಯಂತೆ ಕರು ನಾಯಂತೆ ಬಾಲ ತಾಯಂತೆ ಮಕ್ಕಳು ನೂಲಂತೆ ಸ್ಯಾಲೆ

ಊರೆಲ್ಲ ಸೂರೆ ಆದ ಮೇಲೆ ಬಾಗಿಲ ಮುಚ್ಚಿದರು

ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಹಾಕಿದರು

ಬಿದ್ದಲ್ಲಿ ಸೋತಲ್ಲಿ ಹೊದಿದ್ದ ಬುದ್ಧಿ ತಪ್ಪಿತು

ನಮಸ್ಕಾರ ಮಾಡಲು ಹೋಗಿ ದೇವಸ್ಥಾನದ ಗೋಪುರ ತಲೇ ಮೇಲೆ ಬಿತ್ತು

ಕೊಂಕಣ ಸುತ್ತಿ ಮೈಲಾರಕ್ಕೆ ಬಂದ ಹಾಗೆ

ಅರಗಿನಂತೆ ತಾಯಿ, ಮರದಂತೆ ಮಕ್ಕಳು

ಹೊತ್ತು ಮೀರಿದ ಮಾತು ತನಗೇ ಕುತ್ತು ತಂತು

ಅತಿ ಆಸೆ ಗತಿಗೇಡು

ಇದ್ದೋರು ಮೂರು ಜನರಲ್ಲಿ ಕದ್ದೋರು ಯಾರು ?

ತನಗಿಲ್ಲದ್ದು ಎಲ್ಲಿದ್ದರೇನು

ಅಕ್ಕಿಯ ಮೇಗಳ ಆಸೆ, ನೆಂಟರ ಮೇಗಳ ಬಯಕೆ

ಮುಂದೆ ಬರೋ ಕೋಡಿಗಿಂತ ಹಿಂದೆ ಬರೋ ಬಾಲಾನೇ ವಾಸಿ

ಹಿರಿಯಕ್ಕನ ಚಾಳಿ ಮನೆಮಂದಿಗೆಲ್ಲ

ಉಪ್ಪ ತಿಂದ ಮೇಲೆ ನೀರು ಕುಡಿಯಲೇ ಬೆಕು

ಕೋತಿ ಮೊಸರು ಕುಡಿದು ಮೇಕೆ ಬಾಯಿಗೆ ಒರೆಸಿತಂತೆ

ಉಂಡದ್ದೇ ಉಗಾದಿ , ಮಿಂದದ್ದೇ ದೀವಳಿಗೆ , ಹೊಟ್ಟೆಗಿಲ್ಲದ್ದೇ ಏಕಾದಶಿ.

ಬಹುಮನದ ಹಾದಿ ಕೈಗೊಂಡರೆ ಸುಖವಿಲ್ಲ



| | |
|---|---|
| **Download**: Kannadapdf.com | https://kannadapdf.com/ |

ಅಡ್ಡಗೋಡೆ ಮೇಲೆ ದೀಪ ಇಟ್ಟ ಹಾಗೆ.

ಸೇರಿಗೆ ಸವ್ವಾ ಸೇರು

ಬನ್ನ ಪಟ್ಟುಣ್ಣೋ ಬಿಸಿ ಅನ್ನಕ್ಕಿಂತ ತಂಗುಳೇ ಲೇಸು

ಬೆರಳು ತೋರಿಸಿದರೆ ಹಸ್ತ ನುಂಗಿದರಂತೆ

ಅರ್ಧ ಕಲಿತವನ ಆಬ್ಬರ ಹೆಚ್ಚು.

ಬಾಳಿಬದುಕಿದವ ಕಲಿ(=ವಿದ್ಯೆ)ಕಲಿತ, ಬಾಳಲಾರದವ ಪಾಠ ಕಲಿತ

ಸಂದೀಲಿ ಸಮಾರಾಧನೆ

ಕಲ್ತದ್ ಬಿಟ್ಟೆಯಾ ಕಲಕೇತಿ ಅಂದ್ರೆ ಊರು ಬಿಟ್ರು ನಾ ಕಲ್ತದ್ ಬಿಡಲ್ಲ ಅಂದ್ಲಂತೆ

ಕಲ್ಲು ಇದ್ದಾಗ ನಾಯಿ ಇಲ್ಲ ನಾಯಿ ಇದ್ದಾಗ ಕಲ್ಲು ಇಲ್ಲ

ಐದು ಕುರುಡರು ಆನೆಯನ್ನು ಬಣ್ಣಿಸಿದ ಹಾಗೆ.

ಕೋಳೀ ಕಾಲಿಗೆ ಗೆಜ್ಜೆ ಕಟ್ಟಿದರೆ ತಿಪ್ಪೆ ಕೆದರೋದು ಬಿಟ್ಟೀತೆ?

ತೂತು ಗತ್ತಲೇಲಿ ತಾತನ ಮದುವೆ

ಮಾತು ಬೆಳ್ಳಿ, ಮೌನ ಬಂಗಾರ.

ಸಜ್ಜನರ ಸಂಗ ಹೆಜ್ಜೇನು ಸವಿದಂತೆ

ಒಗ್ಗಟ್ಟಿಲ್ಲದ ಊರಲ್ಲಿ ಒಪ್ಪತ್ತೂ ಇರಬೇಡ.

ಅಂಗ ತೋರಿಸಿ ಅರ್ಧಾಂಗಿಯಾದಳು.

ಮುಳ್ಳಿನಿಂದ ಮುಳ್ಳು ತೆಗೆ, ಹಗೆಯಿಂದ ಹಗೆ ತೆಗೆ

ಗಾಳಿಯಿಂದ ಹಾರುವುದೋ ತಿರೋಕಲ್ಲು ಮಳೇಲಿ ಬಿದ್ದರೆ ಮರಕ್ಕಿಂತಾ ಕಡೆಯಾದೀತೇ

ಓಡಿ ಹೋಗೊಳು ಮೊಸರಿಗೆ ಹೆಪ್ಪು ಹಾಕ್ತಾಳ

ಚರ್ಮ ಸುಕ್ಕಾದ್ರೆ ಮುಪ್ಪು, ಕರ್ಮ ಮುಕ್ಕಾದ್ರೆ ಮುಕ್ತಿ



| | |
|---|---|
| **Download**: Kannadapdf.com | https://kannadapdf.com/ |

ಯಾರನ್ನ ನಂಬಿದರು ಆರೈದು ನಂಬಬೇಕು

ಒಲಿದರೆ ನಾರಿ ಮುನಿದರೆ ಮಾರಿ

ಮುತ್ತು ಒಡೆದರೆ ಹೋಯ್ತು, ಮಾತು ಆಡಿದರೆ ಹೋಯ್ತು

ಬರಗಾಲದಲ್ಲಿ ಅಧಿಕ ಮಾಸ.

ಆಕಳ ಹೊಟ್ಟೆಯಲ್ಲಿ ಅಚ್ಚೇರು ಬಂಗಾರ.

ನಾಯಿನ ಕರೆದುಕೊಂಡು ಹೋಗಿ ಸಿಂಹಾಸಾನದ ಮೇಲೆ ಕೂರಿಸಿದ ಹಾಗಯ್ತು.

ಹಿರೀಅಕ್ಕನ ಚಾಳಿ ಮನೆ ಮಕ್ಕಳಿಗೆಲ್ಲಾ

ಸಾವಿರ ಸುಳ್ಳು ಹೇಳಿ ಒಂದು ಮದುವೆ ಮಾಡು

ಸೂಳೆ ಪಾಪ ಸನ್ಯಾಸಿಗೆ

ಗಾಳಿ ಗುದ್ದಿ ಮೈ ಕೈ ನೋಯಿಸಿಕೊಂಡಂತೆ

ಕೂತು ತಿನ್ನುವವನಿಗೆ ಕುಡಿಕೆ ಹಣ ಸಾಲದು

ಊರಿಗೆ ದಾರೀಯ ಯಾರು ತೋರಿದರೇನು

ಒಕ್ಕಣ್ಣರ ನಾಡಿಗೆ ಹೋದ್ರೆ ಒಂದು ಕಣ್ಣು ಮುಚ್ಚಿ ನಡೆಯಬೇಕು

ಪ್ರಾರಬ್ಧ ಬಂದ ಕಾಲಕ್ಕೆ ಒಂದಲ್ಲ ಒಂದು ಕೇಡು

ಬೆಕ್ಕು ಕಣ್ಣು ಮುಚ್ಚಿಕೊಂಡು ಹಾಲು ಕುಡಿದಂತೆ

ಹೌದಪ್ಪನ ಚಾವಡಿಯಲ್ಲಿ ಅಲ್ಲಪ್ಪನನ್ನು ಕೇಳುವವರಾರು.

ಕಳ್ಳನ ಹೆಂಡತಿ ಎಂದಿದ್ದರೂ ಮುಂಡೆ.

ಮರದಂತೆ ಮಕ್ಕಳು

ರಾಜ ಇರೋತನಕ ರಾಣಿ ಭೋಗ

ಒಂದು ಕಣ್ಣಿಗೆ ಬೆಣ್ಣೆ, ಇನ್ನೊಂದು ಕಣ್ಣಿಗೆ ಸುಣ್ಣ.

| | |
|---|---|
| **Download**: Kannadapdf.com | https://kannadapdf.com/ |

ತಿರೋಕಲ್ಲು ಮಳೇಲಿ ಬಿದ್ದರೆ ಮರಕ್ಕಿಂತಾ ಕಡೆಯಾದೀತೇ

ಪಡಿಗೆ ಬಂದವನಿಗೆ ಕಡಿ ಅಕ್ಕಿ ಆಗದೇ.

ಆನೆಯ ಹೊಟ್ಟೆಗೆ ಅಂಬಲಿ ಬಿಟ್ಟ ಹಾಗೆ

ಹೆರಿಗೆ ಬೇನೆ ಕೆಲ ಗಂಟೆ ಗಂಟ, ಬಂಜೆ ಬೇನೆ ಬದುಕಿನ ಗಂಟ

ಕತ್ತೆಯಾಗಬೇಡ ಕಾಗೆಯಾಗು.

ಆಗುವ (ಅಡುವ) ವರೆಗಿದ್ದು ಆರುವ ವರೆಗೆ ಇರಲಾರರೇ

ಜ್ಯೋತಿಯ ನೆಲೆ ಅರಿತವನೇ ಯೋಗಿ

ಓದುವಾಗ ಓದು; ಆಡುವಾಗ ಆಡು

ಕುದುರೆ ಕುರುಡಾದರೂ ಕಡಿಮೆಯೇನೂ ತಿನ್ನುವುದಿಲ್ಲ!

ಕಾಣದಿರೋ ದೇವರಿಗಿಂತ ಕಾಣೋ ಭೂತಾನೇ ವಾಸಿ

ಹೆತ್ತವರು ಹೆಸರಿಕ್ಕ ಬೇಕು

ಹೊಳೆಗೆ ಸುರಿದರೂ ಅಳೆದು ಸುರಿ

ಭಂಗಿ ದೇವರಿಗೆ ಹೆಂಡಗುಡುಕ ಪೂಜರಿ

ಶರಣರ ಬದುಕು ಅವರ ಮರಣದಲ್ಲಿ ನೋಡು.

ತಡೇ ಕಟ್ಟುವವನ ಮುಂದೆ ಮುಡಿಯೇನು

ಚೇಳಿಗೆ ಪಾರುಪತ್ಯ ಕೊಟ್ಟರೆ ಮನೆಯವರಿಗೆಲ್ಲಾ ಮುಟ್ಟಿಸಿತಂತೆ.

ನಕ್ಕು ನುಡಿದವರು ಕಡೆಗೆ ಅಡವಿಯಲಿಕ್ಕಿ ಬರುವರು

ಬುದ್ಧಿ ಇದ್ದವನಲ್ಲಿ ಶ್ರದ್ಧೆ, ನಿದ್ದೆ ಬಾರದವನಲ್ಲಿ ವಿದ್ಯೆ.

ಮಾರಿ ಕಣ್ಣು ಹೋರಿ ಮ್ಯಾಲೆ, ಕಟುಕನ ಕಣ್ಣು ಕುರಿ ಮ್ಯಾಲೆ

ರೊಂಡಿಗೆ ಏಟು ಬಿದ್ರೆ ಮೊಂಡಿಗೆ ಮುಲಾಮು ಹಚ್ಚಿದರು

ಬಲ್ಲಿದವನಿಗೆ ಕಬ್ಬು.

ತಗಣೇ ಉಪದ್ರವ ಮಗಳಿಗೂ ಬಿಡಲಿಲ್ಲ

ಅರಸನ ಕುದರೆ ಲಾಯದಲ್ಲೆ ಮುಪ್ಪಾಯಿತು

ಬಲ್ಲವನೇ ಬಲ್ಲ ಬೆಲ್ಲದ ರುಚಿಯ

ನೀರಿಳಿಯದ ಗಂಟಲೊಳ್ ಕಡುಬಂ ತುರುಕಿದಂತಾಯ್ತು (ಮುದ್ದಣ)

ಮನೆ ದೇವರನ್ನ ಮೂಲೆಗಿಟ್ಟು ಬೆಟ್ಟದ ದೇವರಿಗೆ ಬುತ್ತಿ ಹೊತ್ತಂತೆ.

ಊಟಕ್ಕೆ ಮೊದಲು ಉಪ್ಪಿನ ಕಾಯಿ, ಮಾತಿಗೆ ಮೊದಲು ಗಾದೆ.

ವ್ಯಾಪಾರಕ್ಕೆ ನಿಮಿಷ ಬೇಸಾಯಕ್ಕೆ ವರುಷ

ತಿಪ್ಪೇ ಮೇಲೇ ಮುಪ್ಪಾದ ಕುಂಬಾರ

ಓದಿ ಓದಿ ಮರುಳಾದ ಕೋಚು ಭಟ್ಟ

ಗುಡ್ಡದ ಮೇಲೆ ಕಪಿ ಸತ್ತರೆ ಊರಿಗೆಲ್ಲಾ ಸೂತಕ.

ಬೆಕ್ಕು ಕಣ್ಮುಚ್ಚಿ ಹಾಲು ಕುಡಿದರೆ ಜಗತ್ತಿಗೆ ಗೊತ್ತಾಗಲ್ವಾ?

ನಿಜವ ಹಿಡಿ ಘಟವ ನೆಚ್ಚದಿರು

ಒಲ್ಲದ ಗಂಡಗೆ ಬೆಣ್ಣೇಲಿ ಕಲ್ಲು

ಮುತ್ತು ಹೆಚ್ಚಾಯ್ತು ಅಂತ ಎಲ್ಲೆಲ್ಲಿಗೋ ತೊಟ್ರಂತೆ.

ತವಕ ಪಟ್ಟವ ತಬ್ಬರಿಸಿ ಬಿದ್ದ

ಬಸುರಲ್ಲಿ ಬಂದ ಕೂಸು ಮುದ್ದು

ಗುಣಗೇಡಿ ಒಡನಾಟ ಯಾವಾಲು ದುಃಖದೇಲ್ ಇದ್ದಂತೆ

ಕೈಗೆ ಬಂದ ತುತ್ತು ಬಾಯಿಗೆ ಇಲ್ಲ

ಹಾಕೋದು ಬಿತ್ತೋದು ನನ್ನಿಚ್ಛೆ; ಆಗೋದು ಹೋಗೋದು ದೇವರಿಚ್ಛೆ



| Download: Kannadapdf.com | https://kannadapdf.com/ |
| --- | --- |

ಹಣ ಅಂದ್ರೆ ಹೆಣವೂ ಬಾಯಿ ಬಿಡ್ತದೆ

ಹರಯದಲ್ಲಿ ಹಂದಿ ಕೂಡ ಚೆನ್ನಾಗಿರುತ್ತೆ.

ಅಂದು ಬಾ ಅಂದ್ರೆ ಮಿಂದು ಬಂದ

ಮೋರೆ ಎಲ್ಲಮ್ಮನ ಗುಡ್ಡದಾಗ ಮುಲ್ಲಾಂದೇನು

ಇಕ್ಕೇರಿ ತನಕ ಬಳಗ, ಮಾನ ಮುಚ್ಚಲಿಕ್ಕೆ ಅರಿವೆ ಇಲ್ಲ

ಹಾಲು ಬಿಟ್ಟವರ ಮನೆಗೆ ಸೀಬಿ ಅಂದಂಗೆ.

ಕಬ್ಬು ಡೊಂಕಾದ್ರೆ ಸವಿ ಡೊಂಕೇ

ಹಾಲಿನ ದುಡ್ಡು ಹಾಲಿಗೆ;ನೀರಿನ ದುಡ್ಡು ನೀರಿಗೆ

ಎಲ್ಲರು ಆಸೆ ಬಿಟ್ಟರೆ ಇಲ್ಲಿಯೇ ಕೈಲಾಸ, ಎಲ್ಲವ ಬಯಸಿ ಭ್ರಮಿಸಿದರೆ ಇಲ್ಲಿಯೇ ನರಕ

ಆಡೋದು ಮಡಿ ಉಂಬೋದು ಮೈಲಿಗೆ

ಕೊಟ್ಟೋನು ಕೋಡಂಗಿ, ಇಸ್ಕೊಂಡೋನು ಈರಭದ್ರ

ದಡ್ಡನಿಗೆ ಹಗಲು ಕಳೆಯುವುದಿಲ್ಲ, ಒಳ್ಳೆಯವನಿಗೆ ರಾತ್ರಿ ಸಾಲುವುದಿಲ್ಲ.

ಸಜ್ಜನರ ಮಾತು ಸಿಹಿ, ದುರ್ಜನರ ತುತ್ತು ಕಹಿ.

ಎಟ್ (ಹಟಮಾರಿ) ಗಂಡಗೆ ಖೊಟ್ಟಿ ಹೆಂಡತಿ

ತುಂಬಿದ ಕೊಡ ತುಳುಕುವುದಿಲ್ಲ.

ಸೊಕ್ಕಿದ್ದವನಿಗೆ ಯಾಣ, ರೊಕ್ಕಿದ್ದವನಿಗೆ ಪಟ್ಟಣ.

ಮಾಡಿದ್ದುಣ್ಣೋ ಮಹರಾಯ.

ಸನ್ಯಾಸಿ ಬೆಕ್ಕು ಸಾಕಿದ ಹಾಗೆ

ವೈಕುಂಠಕ್ಕೆ ಹೋಗಲಿಕ್ಕೆ ಕುಂಟು ದಾಸಯ್ಯನ ಮಧ್ಯಸ್ತಿಕೆಯೇ?

ಹಲ್ಲಿರುವ ತನಕ ಊಟ ಕಣ್ಣಿರುವ ತನಕ ನೋಟ.

| | |
|---|---|
| **Download**: Kannadapdf.com | https://kannadapdf.com/ |

ನಿಸ್ಸಹಾಯಕರ ಮೇಲೆ ಹುಲ್ಲು ಕಡ್ಡಿ ಸಹ ಬುಸುಗುಟ್ಟುತ್ತೆ.

ಕೃಷಿತೋನಾಸ್ತಿ ದುರ್ಭಿಕ್ಷಂ

ಕೆಟ್ಟ ಮೇಲೆ ಬುದ್ಧಿ ಬಂತು, ಅಟ್ಟ ಮೇಲೆ ಒಲೆ ಉರಿಯಿತು

ಹೊಳೆ ನೀರಿಗೆ ದೊಣೆನಾಯ್ಕನ ಅಪ್ಪಣೆ ಏಕೆ ?

ಎಂಟು ಹೊನ್ನು ಘನವಾದ ನಂಟು

ಕಾಲಕ್ಕೆ ತಕ್ಕಂತೆ ನಡೆಯಬೇಕು, ತಾಳಕ್ಕೆ ತಕ್ಕಂತೆ ಕುಣಿಯಬೇಕು

ಕೆಟ್ಟ ಕಾಲ ಬಂದಾಗ ಕಟ್ಟಿಕೊಂಡವಳೂ ಕೆಟ್ಟವಳು

ಸಗಣಿಯವನ ಸರಸಕ್ಕಿಂತ, ಗಂಧದವನ ಗುದ್ದಾಟ ಮೇಲು

ತಾರೇಮರದ ಕಾಯಾದರೂ ಕರೆದರೆ ಬಂದೀತೇ

ಬಡವನ ಕೋಪ ದವಡೆಗೆ ಮೂಲ

ಶಿಸ್ತುಗಾರ ಪುಟ್ಟಶಾಮಿ

ಕೈಯಲ್ಲಿ ಶರಣಾರ್ಥಿ, ಕಂಕುಳಲ್ಲಿ ದೊಣ್ಣೆ

ಕಾಮಾಲೆ ಕಣ್ಣೊನಿಗೆ ಕಂಡಿದ್ದೆಲ್ಲ ಹಳದಿ ನೇ

ಕಷ್ಟಗಳು ಹೇಳದೆ ಕೇಳದೆ ಬರೋ ನೆಂಟರ ಹಾಗೆ.

ಕಳ್ಳನ ಹೆಂಡತಿ ಎಂದಿದ್ದರೂ ಮುಂ..

ಸೀರೆ ಗಂಟು ಬಿಚ್ಚೋವಾಗ ದಾರದ ನಂಟು ಯಾರಿಗೆ ಬೇಕು.

ಸಾಲಗಾರ ಸುಮ್ಮನಿದ್ದರೂ ಸಾಕ್ಷಿದಾರ ಸುಮ್ಮನಿರ

ಉಂಬುವ ಜಂಗಮ ಬಂದರೆ ನಡೆಯೆಂಬರು, ಉಣ್ಣದ ಲಿಂಗಕ್ಕೆ ಬೋನ ಹಿಡಿಯೆಂಬರು

ಅನುಭವಿಗೆ ಬೇರೆ ಮತವಿಲ್ಲ

ಹಣ ಇದ್ದೋರಿಗೆ ಏನೆಲ್ಲ, ಗುಣ ಇದ್ದೋರಿಗೆ ಏನಿಲ್ಲ

| | |
|---|---|
| **Download**: [Kannadapdf.com] | [https://kannadapdf.com/] |

ಸೀರಿಗೇಡಿಗೆ ಸೀರೆ ಉಡಿಸಿದರೆ ಕೆರಿ ದಂಡಿ ಮ್ಯಾಗ ನಿಂತು ಕೇಕೆ ಹಾಕಿದಳು.

ಬೆಣ್ಣೆಯೊಳಗಿನ ಕೂದಲು ತೆಗೆದಂತೆ

ಹೂವಿನಿಂದ ನಾರು ಸ್ವರ್ಗ ಸೇರಿತು

ಕಂಡ ಕಳ್ಳ ಜೀವ ಸಹಿತ ಬಿಡ

ಹಗೆಯೋನ ಕೊಲ್ಲಾಕೆ ಹಗಲೇನು ಇರುಳೇನು

ಸುಳ್ಳನ ಮಾತು ಕೆಸರೊಳಗೆ ಮುಳ್ಳು ತುಳಿದಂತೆ

ಧರ್ಮದ ಹಾದಿ ತಿಳಿದವನಿಗೆ ಓದು ವಾದಗಳೇಕೆ

ಹರೆಯಕ್ಕೆ ಬಂದಾಗ ಹಂದಿನೂ ಚಂದ

ತರಗು ತಿಂಬುವುದೇ ಪರಮ ಸುಖ

ಅಕ್ಕಸಾಲಿ ಅಕ್ಕನ ಚಿನ್ನಾನೂ ಬಿಡ

ಉಡೋಕೆ ಇಲ್ಲದವ ಮೈಲಿಗೆಗೆ ಹೇಸ, ಉಂಬೋಕೆ ಇಲ್ಲದವ ಎಂಜಲಿಗೆ ಹೇಸ

ಅರ್ತಿಗೆ ಬಳೆ ತೊಟ್ಟು ಕೈ ಕೊಡವಿದರೆ ಹೋದೀತೆ

ಕುದಿಯುವ ಎಣ್ಣೆಯಿಂದ ಕಾದ ತವದ ಮೇಲೆ ಬಿದ್ದ ಹಾಗೆ

ಅಕ್ಕ ಸತ್ತರೆ ಅಮಾವಾಸ್ಯೆ ನಿಲ್ಲುತ್ತದೆಯೆ ?

ಹೊತ್ತು ಬಂದತ್ತ ಕೊಡೆ ಹಿಡಿ

ಜಟ್ಟಿ ಬಿದ್ದರೂ ಮೀಸೆ ಮಣ್ಣಾಗಲಿಲ್ಲ

ಸಾವಿರ ವರ್ಷ ಸಾಮು ಮಾಡಿ ಸಾಯೋ ಮುದುಕಿ ಸೊಂಟ ಮುರಿದ

ಮೇಯುವುದಕ್ಕೆ ಮುಂದೆ ;ಮೀಯುವುದಕ್ಕೆ ಹಿಂದೆ

ತೀರ್ಥ ಎಂದು ಎಲ್ಲೆಲ್ಲೋ ನೀರು ಕುಡಿದಂತೆ!

ಕಾರ್ಯವಾಸಿ ಕತ್ತೆ ಕಾಲು ಕಟ್ಟು



| | |
|---|---|
| **Download**: Kannadapdf.com | https://kannadapdf.com/ |

ತರಲಿಲ್ಲ ಬರಲಿಲ್ಲ ಬರ ಹ್ಯಾಗೆ ಹಿಂಗೀತು

ಸಹವಾಸ ದೋಷದಿಂದ ಸನ್ಯಾಸಿ ಕೆಟ್ಟ

ಒನಕೆ ಮುಂಡು ಚಿಗುರಿದಂತೆ

ಕಿಡಿ ಇಲ್ಲದೆ ಬೆಂಕಿಯಿಲ್ಲ ;ಕಾರಣ ಇಲ್ಲದೆ ಜಗಳವಿಲ್ಲ

ಹೋದ್ರೆ ಒಂದು ಕಲ್ಲು, ಬಂದ್ರೆ ಒಂದು ಹಣ್ಣು

ಉಣ್ಣೋಕಿಲ್ಲದಿದ್ದರೂ ಸಣ್ಣಕ್ಕಿ ಅನ್ನ ತಿಂದರು ; ಉಡೋಕಿಲ್ಲದಿದ್ದರೂ ಪಟ್ಟೆ ಸೀರೆ ಉಟ್ಟರು

ಹೊನ್ನಿನ ಶೃತಿ ಕೇಳಿ ಎಂಥೆಂಥಾವರೆಲ್ಲ ಭ್ರಮೆಗೆ ಬಿದ್ದರು

ಹುಣ್ಣಿನ ಮೇಲೆ ಉಪ್ಪು ಸವರಿದಂತೆ

ತಿನ್ನಲು, ಉಣ್ಣಲು ಇದ್ದರೆ ಯಾವತ್ತೂ ನೆಂಟರು.

ಬಾಡಿಗೆ ಎತ್ತೆಂದು ಬಡಿದು ಬಡಿದು ಹೂಡಬೇಕೆ

ಹಗ್ಗ ತಿನ್ನೋ ಹನುಮಂತ ರಾಯನಿಗೆ ಜ್ವಾಳದ ಶಾವಿಗೆ ಎಷ್ಟು ಕೊಟ್ಟೀಯ

ತರ್ಕಾ ಮಾಡುವವ ಮೂರ್ಕನಿಂದ ಕಡೆ

ಅಲ್ಪರ ಸಂಗ ಅಭಿಮಾನ ಭಂಗ

ಎತ್ತ ಹೋದರೂ ಬಿಡದು ಒತ್ತಿ ಕಾಡುವ ವಿಧಿ

ಹೊರಗೆ ಥಳುಕು, ಒಳಗೆ ಹುಳುಕು

ಉಳ್ಳನಕ ಹಿರಿಯಣ್ಣ ಇಲ್ಲಾದಗ ನಡಿಯಣ್ಣ

ಅಕ್ಕನ ಹಗೆ ಬಾವನ ನೆಂಟು

ಓತಿಕ್ಯಾತಕ್ಕೆ ಬೇಲಿ ಗೂಟ ಸಾಕ್ಷಿ

ಹಾಲು ಮಾರಿದ್ದು ಹಾಲಿಗೆ ನೀರು ಮಾರಿದ್ದು ನೀರಿಗೆ

ರಾಗಿಕಲ್ಲು ತಿರುಗುವಾಗ ರಾಜ್ಯವೆಲ್ಲಾ ನೆಂಟರು



| | |
|---|---|
| **Download**: Kannadapdf.com | https://kannadapdf.com/ |

ಆಳ್ ಮೇಲ್ ಆಳ್ ಬಿದ್ದು ಗೋಣಿ ಬರಿದಾಯ್ತು

ಪುರಾಣ ಹೇಳೋಕ್ಕೆ, ಬದನೇಕಾಯಿ ತಿನ್ನೋಕ್ಕೆ.

ಹತ್ತಾರು ಜನ ಓಡಾಡೋ ಕಡೇಲಿ ಹುಲ್ಲು ಬೆಳೆಯೊಲ್ಲ

ಕೀಳನ ಕೆಣಕಬೇಡ, ಮೇಗಾಲು ತುರಿಸಬೇಡ.

ಸಂಸಾರಿಯ ಸಹವಾಸ ಮಾಡಿ ಸಂನ್ಯಾಸಿ ಕೆಟ್ಟ.

ಕೋಮಟಿ ಕೊಡ;ಜೈನಿಗ ಬಿಡ

ಹುಚ್ಚಲ್ಲ,ಬೆಪ್ಪಲ್ಲ,ಶಿವಲೀಲೆ

ಅರಸು ಆದೀಕ ತಿಂದ, ಪರದಾನಿ ಹೂಸು ಕುಡಿದ

ಕಪ್ಪೆ ತಕ್ಕಡೀಲಿ ಹಾಕಿದ ಹಾಗೆ

ಕಲ್ಲಿನಲ್ಲಿ ಕಳೆಯ ನಿಲ್ಲಿಸಿದ ಗುರುವಿನ ಸೊಲ್ಲಿನಲ್ಲೇ ದೈವ

ಹೆಣ್ಣು ತಿರುಗಿ ಕೆಟ್ಟಳು, ಗಂಡು ಕೂತು ಕೆಟ್ಟನು.

ಹೆದರುವವರ ಮೇಲೆ ಕಪ್ಪೆ ಎಸೆದಂತೆ

ಹಂಗು ತೊರೆದ ಮೇಲೆ ಲಿಂಗದ ಪರಿವೆ ಏನು

ಕೈಲಾದವರು ಮಾಡುತ್ತಾರೆ ಕೈಲಾಗದವರು ಆಡುತ್ತಾರೆ

ಅರಿತರೆ ಮಾತನಾಡು, ಮರೆತರೆ ಕೂತು ನೋಡು.

ಸಾದೆತ್ತಿಗೆ ಎರಡು ಹೇರು (ಹೊರೆ)

ಇಂಬರಿದು ಕೊಡುವಳೆ ರಂಭೆ

ಆಗ-ಭೋಗ ಸೂಳೆ ಪಾಲು , ಗೂರಲು ಉಬ್ಬಸ ಹೆಂಡತಿ ಪಾಲು.

ಕಾಸಿಗೆ ತಕ್ಕ ಕಜ್ಜಾಯ.

ಊರೆಲ್ಲ ದೋಚಿಕೊಂಡು ಹೋದಮೇಲೆ ದೊಡ್ಡಿ (ಕೋಟೆ) ಬಾಗಿಲು ಹಾಕಿದರಂತೆ.


| **Download**: Kannadapdf.com | https://kannadapdf.com/ |
| --- | --- |

ರಾತ್ರಿ ಕಂಡ ಬಾವೀಲಿ ಹಗಲು ಬಿದ್ದಂಗೆ

ಹತ್ತು ಕಟ್ಟುವಲ್ಲಿ ಒಂದು ಮುತ್ತು ಕಟ್ಟು

ಹಣ್ಣೆಲೆ ಉದುರುವಾಗ ಚಿಗುರೆಲೆ ನಗುತಿತ್ತು

ರಾಯ ಸತ್ತರೂ ಹೆಣ ; ನಾಯಿ ಸತ್ತರೂ ಹೆಣ .

ಕೂಡಿದ ಗಂಡನನ್ನಾದರೂ ಬಿಟ್ಟೇನು ಕಲ್ತದ್ದ ಬಿಡಲಾರೆ

ಹಾರಾಡೋ ಅಪ್ಪುಂಗೆ ತೂರಾಡೋ ಮಗ ಹುಟ್ಟಂಗೆ

ನಮ್ಮ ದೇವರ ಸತ್ಯ ನಮಗೆ ಗೊತ್ತಿಲ್ಲವೇ ?

ಕಣ ಕಾಯಬಹುದು, ಹೆಣ ಕಾಯಾಕೆ (ಬೇಸರದಿಂದ ಹೊತ್ತು ಕಳೆಯಲಿಕ್ಕೆ) ಆಗೊದಿಲ್ಲ

ಒಂದು ಕಣ್ಣೀಗೆ ಬೆಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ

ನಿಷ್ಠೆ ಇಲ್ಲದೆ ಎಷ್ಟು ಪೂಜೆ ಮಾಡಿದರೂ ನಷ್ಟ

ತರುಬಿ ಹೋಗುವವನ್ನ ಕರುಬಿ (=ಅಸೂಯೆ) ಮಾಡುವುದೇನು?

ತಾಯಿ ಬೇಕು ಇಲ್ಲವೇ ಬಾಯಿ ಬೇಕು.

ತಾಳೇ ಹಣ್ಣು ತಾನೇ ಬಿದ್ದರೂ ಬಾಳಾದ ಮುರವಗೆ ಬಾಯಿ ಮುಚ್ಚಿತು

ಹಲ್ಲಿದ್ದಾಗ ಕಡ್ಲೆ ಇಲ್ಲ; ಕಡ್ಲೆ ಇದ್ದಾಗ ಹಲ್ಲಿಲ್ಲ

ಊರಿಗೆ ಬಂದ ನೀರೆ ನೀರಿಗೆ ಬಾರದಿರುತ್ತಾಳೆಯೇ?

ಬಿದ್ದಿನ (=ಅತಿಥಿ, ನೆಂಟ) ಬಂದು ಹಾಳು ಮನೇ ಯಜಮಾನ (ಮನೆಯೊಡೆಯ) ಕುಂತು ಹಾಳು

ಸಾದೆತ್ತಿಗೆ ಎರಡು ಹೇರು

ಎರವಿನವರು ಎರವು ಕಸಗೊಂಡರೆ ಕೆರವಿನಂತಾಯಿತು ಮೋರೆ

ಹಾಗಲಕಾಯಿಗೆ ಬೇವಿನಕಾಯಿ ಸಾಕ್ಷಿ.

ಗಂಧದ ಮರವನ್ನು ಸುಟ್ಟು ಬೂದಿಯ ತಂದು ಪೂಸಿದ

ನೀರ ಕಡಿದರೆ ಬೆಣ್ಣೆ ಬಂದಾದೇನೆ

ಕೀರ್ತಿಯೇ ಕೈಲಾಸ ಅಪಕೀರ್ತಿಯೇ ನರಕ

ಉತ್ತಮ ಹೊಲ ಮಧ್ಯಮ ವ್ಯಾಪಾರ ಕನಿಷ್ಠ ಚಾಕರಿ

ಹಣ ಇಲ್ಲದವ ಹೆಣಕ್ಕಿಂತ ಕಡೆ

ಆಸೆಯಿಂದ ಅಳಿಯ ಬಂದ್ರೆ ಮಗಳು ಹೊರಗಾಗಿರೋದೇ?

ಆಗರಕ್ಕೆ ಹೋಗಿ ನನ್ನ ಗಂಡ ಗೂಬೆ ತಂದ

ಮಾಡೋರನ್ನು ಕಂಡರೆ ನೋಡು ನನ್ನ ಸಿರೀನ

ಮನೆಗೆ ಬೆಂಕಿ ಬಿದ್ದಾಗ ಬಾವಿ ತೋಡಿದರಂತೆ

ಹೊಳೆ ನೀರಿಗೆ ದೊಣ್ಣೆನಾಯಕನ ಅಪ್ಪಣೆ ಬೇಕೆ ?

ಪ್ರಯತ್ನಕ್ಕೆ ಪರಮೇಶ್ವರನೂ ಸಹಾಯ ಮಾಡುವನು.

ಹಾರುವರ ಕೇರೀಲಿ ಹಬ್ಬ ಆದ್ರೆ ಮೂಳನಾಯಿಗೇನು ಓಡಾಟ

ಗಣೇಶನನ್ನು ಮಾಡಲು ಹೋಗಿ ಅವರ ಅಪ್ಪನನ್ನು ಮಾಡಿದಂತೆ

ಆಲಸಿ-ಮುಂಡೇದ್ಕೆ ಎರಡು ಖರ್ಚು, ಲೋಭಿ-ಮುಂಡೇದ್ಕೆ ಮೂರು ಖರ್ಚು

ತುಂಬೆ ಗಿಡಕ್ಕೆ ಏಣಿ ಹಾಕಿದಂತೆ

ದುಡ್ಡೇ ದೊಡ್ಡಪ್ಪ,ಬುದ್ಧಿ ಅದರಪ್ಪ

ಕಾಲಿಗೆ ಬಿದ್ದು ಕಾಲುಂಗರ ಬಿಚ್ಚಿಕೊಂಡರಂತೆ

ಅಪ್ಪನ ಕಾಲಕ್ಕೆ ಅರಮನೆ, ಮಗನ ಕಾಲಕ್ಕೆ ಬರೀಮನೆ.

ವೇದ ಸುಳ್ಳಾದ್ರು ಗಾದೆ ಸುಳ್ಳಲ್ಲ.

ಇಲ್ಲದ ಬದುಕು ಮಾಡಿ ಇಲಿಗೆ ಚಣ್ಣ ಹೊಲಿಸಿದರು

ತಲೇ ಕೂದಲು ಉದ್ದವಿದ್ದವಳು ಹ್ಯಾಗೆ ಕಟ್ಟಿದರೂ ಚಂದ



| | |
|---|---|
| **Download**: Kannadapdf.com | https://kannadapdf.com/ |

ದುಡ್ಡಿಗೆ ದುಡ್ಡು ಗಂಟು ಹಾಕಿದ್ಯೋ? ಬೆನ್ನಿಗೆ ಹೊಟ್ಟೆ ಅಂಟು ಹಾಕಿದ್ಯೋ?

ಹಲವು ಸಲ ಸಾಯುವವನು ಹೇಡಿ,ವೀರಯೋಧನಿಗೊಂದೇ ಸಲ ಸಾವು

ಬೆಳ್ಳಯ್ಯ ಕಾಕಾ ಅರಿವಯ್ಯ ಮೂಕ

ಆರಿದೋಗರಕ್ಕೆ ಮೊಸರಿಕ್ಕಿ ಕಾಗೆಗೆ ಸೂರೆಕೊಟ್ಟರು

ಊರಿಗೆಲ್ಲಾ ಒಬ್ಬಳೇ ಪದ್ಮಾವತಿ

ಕಲಿತವನಿಗಿಂತ ನುರಿತವನೇ ಮೇಲು.

ದಾನ ಮಾಡೋಕೆ ಕನಲುವ ಮಾನವ ದಂಡ ಚಕಾರ ಎತ್ತದೆ ತೆರುವ

ತಾಳೆಮರ ಉದ್ದವಾದರೆ ಕೋಳಿಗೆ ಬಂದದ್ದೇನು

ಹುಣಿಸೆ ಮರ ಮುದಿಯಾದ್ರೂ ಕಾಯಿ ಹುಳಿ ಹೋಗಲ್ಲ

ಎಲ್ಲಾ ಜಾಣ, ತುಸು ಕೋಣ.

ಬಿಟ್ಟಿ ಬಂದದ್ದಾದರೆ ನನಗೂ ಇರಲಿ,ನಮ್ಮ ತಾತಂಗೂ ಇರಲಿ.

ಅಡವಿಯ ದೊಣ್ಣೆ ಪರದೇಸಿಯ ತಲೆ

ಜನಕ್ಕಂಜದಿದ್ದರೂ ಮನಕ್ಕಂಜಬೇಕು

ತಮ್ಮ ಕಲಹಕ್ಕೆ ಐವರು ಪರರ ಕಲಹಕ್ಕೆ ನೂರಾ ಐವರು

ತೋಳ ಬಿದ್ದರೆ ಆಳಿಗೊಂದು ಕಲ್ಲು

ತಾನಾಗಿ ಬೀಳುವ ಮರಕ್ಕೆ ಕೊಡಲಿ ಇಕ್ಕಿದ ಹಾಗೆ

ಎತ್ತು ಮಾರಿದವಗೆ ಹಗ್ಗದ ಆಸೆಯೇ

ಸೊಪ್ಪುಸೆದೆ ತಿನ್ನೋರ ಒಪ್ಪ ನೋಡು, ತುಪ್ಪತೊಗೆ ತಿನ್ನೋರ ರಂಪ ನೋಡು

ತವಡು ತಿಂಬುವನಿಗೆ ವಯ್ಯಾರ ಯಾಕೆ

ಬಾಯಿ ಇದ್ದರೆ ಮಗ ಬದುಕ್ಯಾನು.

| | |
|---|---|
| **Download**: Kannadapdf.com | https://kannadapdf.com/ |

ತನ್ನ ತಾನರಿತವಗೇ ತ್ರಿಭುವನ ತನ್ನೊಳಗೆ ಕಂಡಿತ್ತು

ಹರುವಯ್ಯನ ಎಲೆ ಇಂಬ, ಒಕ್ಕಲಿಗನ ಮನೆ ಇಂಬ

ಬೇಲಿಯೇ ಎದ್ದು ಹೊಲ ಮೇಯ್ದಂತೆ

ಬರ್ತಾ ಬರ್ತಾ ರಾಯರ ಕುದುರೆ ಕತ್ತೆಯಾಯ್ತು

ಕೋಪದಲ್ಲಿ ಕುಯ್ದ ಮೂಗು ಶಾಂತಿಯಲ್ಲಿ ಬಂದೀತೇ

ಹತ್ತು ಮಕ್ಕಳ ತಾಯಾದರೂ ಸತ್ತ ಮಗನ್ನ ಮರೆಯೊದಿಲ್ಲ

ಬೆಕ್ಕಿನ ಕನಸಿನಲ್ಲಿ ಬರೀ ಇಲಿಗಳೇ

ಕೈ ಕೆಸರಾದ್ರೆ ಬಾಯಿ ಮೊಸರು

ಕಜ್ಜಿ ಹೋದರೂ ಕಡಿತ ಹೋಗಲಿಲ್ಲ.

ಮಿಂಚಿಹೋದ ಕಾರ್ಯಕ್ಕೆ ಚಿಂತಿಸಿ ಫಲವೇನು ?

ಇನ್ನೊಬ್ಬರ ಮಾತಿಗೆ ಕಿವಿಗೊಡಬೇಡ, ಚಾಡಿಹೇಳಿ ಜಗಳ ಹಚ್ಚಬೇಡ.

ಶಿಸ್ತುಗಾರ ಪುಟ್ಟಶಾಮಿ ಎದೆ ಸೀಳಿದ್ರೆ ಮೂರಕ್ಷರಾನೂ ಇಲ್ಲ

ಮುದ ಹರಡುವ ಕಲೆ ಋಷಿ ಬಲ್ಲ.

ತಿಪ್ಪೆಯ ಮೇಲೆ ಕುಂಡ್ರುವವಗೆ ತಕ್ಯೆ ಯಾತಕ್ಕೆ

ತಾನೊಲಿದ ಮಂಕು ಮಾಣಿಕ್ಯ

ದಕ್ಷಿಣೆಗೆ ತಕ್ಕ ಪ್ರದಕ್ಷಿಣೆ

ತೀರದ ಕಾರ್ಯ ಹಾರಿದರೂ ಆಗದು

ಸನ್ಯಾಸಿಗೆ ಸುಳ್ಳು ಹೇಳಿದರೂ ನಿಜದ ತಲೆಯ ಮೇಲೆ ಹೊಡೆದಂಗೆ ಹೇಳಬೇಕು

ಅಕ್ಕರೆಯ ಅಕ್ಕ ಬಂದಾಗೇ ಸಕ್ಕರೆಯೆಲ್ಲ ಕಹಿ ಆಯ್ತು

ಮದುವೇಲಿ ಗಂಡು,ಸ್ಮಶಾನ ಯಾತ್ರೇಲಿ ಹೆಣವಾಗೋ ಬಯಕೆ



| Download: Kannadapdf.com | https://kannadapdf.com/ |
| --- | --- |

ಪಾಯಸ ಮಾಡಿ ನಾಯಿ ಬಾಲದಲ್ಲಿ ತೊಳಸಿದ ಹಾಗೆ

ಗುಂಪಿನಲ್ಲಿ ಗೋವಿಂದ

ಅಲಾ ಬಲಾ ಪಾಪಿ ತಲೀ ಮ್ಯಾಲೆ ಸಿಡಿಲು ಬಡಿದರೆ ಅಂಗೈಲಿ ಹಿಡಿದ ಕೊಡೆ ಕಾಪಾಡಿತೇ

ಮನೆ ಗೆದ್ದು ಮಾರು ಗೆಲ್ಲು.

ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ

ಕೊಂಡು ಕೊಟ್ಟದ್ದೂ ಇಲ್ಲ ಹಂಚಿ ಉಂಡದ್ದೂ ಇಲ್ಲ ಸ್ವರ್ಗ ಬೇಕು ಅಂದ

ತಮ್ಮ ಕಲಹಕ್ಕೆ ಐವರು ,ಪರರ ಕಲಹಕ್ಕೆ ನೂರಾ ಐವರು. (ಸುಳಿವು ಪಾಂಡವಕೌರವರು)

ಗುಡಿಸಿದ ಮೇಲೆ ಕಸವಿರಬಾರದು ಬಡಿಸಿದ ಮೇಲೆ ಹಸಿವಿರಬಾರದು

ಡಂಬು ನನ್ನ ಕೇಳು, ಡಬ್ಬು ನನ್ನ ಹೆಂಡ್ರನ್ನ ಕೇಳು

ಕೋಪ ಪಾಪ ತಂತು ಪಾಪ ತಾಪ ತಂತು

ತಕ್ರ (=ಮಜ್ಜಿಗೆ) ಶಕ್ರನಿಗೆ(=ಇಂದ್ರ) ಸಹಾ ದುರ್ಲಭ

ವಿದ್ಯೆ ಇಲ್ಲದವನ ಮೊರೆ ಹಾಳೂರ ಹದ್ದಿನಂತೆ

ತನ್ನ ನೆರಳಿಗೆ ತಾನಂಜಿ ನಡೆಯಬೇಕು

ಲಕ್ಕಿ ಸೊಪ್ಪಾದರೂ ಲೆಕ್ಕದ ಮುದ್ದೆ ಉಣಬೇಕು

ನಾಯಿಗೆ ಕೆಲಸಿಲ್ಲ, ನಿಲ್ಲೋಕೆ ಹೊತ್ತಿಲ್ಲ

ದೈವ ಅನ್ನೋದ ಮತ್ತೆಲ್ಲೂ ನೊಡದೆ ತಾನಿದ್ದ ಒತ್ತಿಲೇ ನೋಡು

ಕಳ್ಳನ ನಂಬಿದ್ರು ಕುಳ್ಳನ ನಂಬಬೇಡ

ಆಪತ್ತಿಗಾದವನೇ ನಿಜವಾದ ಗೆಳೆಯ.

ಗಂಡ ಪಟ್ಟೆ ಸೀರೆ ತರುತ್ತಾನೆಂದು ಇದ್ದ ಬಟ್ಟೆ ಸುಟ್ಟಳಂತೆ.

ನಾಯಿ ಬೊಗಳಿದರೆ ದೇವಲೋಕ ಹಾಳಾಗುತ್ತ?

| | |
|---|---|
| **Download**: Kannadapdf.com | https://kannadapdf.com/ |

# 1000 ಕನ್ನಡ ಗಾದೆಗಳು Pdf - KannadaPdf.com

ಸಿರಿತನ ಇರೂತನ ಹಿರಿತನ ಘನ

ಬೆನ್ನಹಿಂದೆ ಬಿದ್ದು (ಓಡಿ)ಬನ್ನ ಪಟ್ಟ

ಆನೆ ಹೋದದ್ದು ದಾರಿ ಹಾವು ಹರಿದದ್ದು ಅಡ್ಡದಾರಿ

ಮಗ ಸಣ್ಣವನಾದರೂ, ಮಾತು ಸಣ್ಣದಲ್ಲ.

ಅನ್ಯಾಯದಿಂದ ಗಳಿಸಿದ್ದು ಅಸಡ್ಡಾಳಾಗಿ ಹೋಯ್ತು

ಊರಿಗೆ ಊರ ಚಿಂತೆಯಾದರೆ ಅಜ್ಜಿಗೆ ಅರಿವೆ ಚಿಂತೆಯತೆ

ಒಳಿತಾಗಿ ಮುಗಿದಿದ್ದೆಲ್ಲವೂ ಒಳ್ಳೆಯದೇ.

ರಸ ಬೆಳೆದು ಕಸ ತಿನ್ನಬೇಡ, ಹಸ ಕಟ್ಟಿ ಮೊಸರಿಗೆ ಪರದಾಡಬೇಡ

ದೈವದ ಸೊಲ್ಲು ಹರಟುವಾತ ಭವದೊಳಗೆ ತೇಲಾಡುತಿದ್ದ

ಮಂತ್ರ ತಂತ್ರ ದೈವ ಒಲ್ಲದೆ ತನಗೆ ಸ್ವಂತವಲ್ಲ

ಗಿಣಿ ಸಾಕಿ ಗಿಡುಗದ ಕೈಗೆ ಕೊಟ್ಟರು

ಅಂತೂ ಇಂತೂ ಕುಂತಿ ಮಕ್ಕಳಿಗೆ ರಾಜ್ಯವಿಲ್ಲ

ಬಿಡಿಯಕ್ಕೆ ಬಸಿರಾದರೆ ಹಡೆಯೋದು ಕಷ್ಟ

ಹುಚ್ಚರ ಮದುವೆಯಲ್ಲಿ ಉಂಡೋನೇ ಜಾಣ.

ಕುದುರೆ ಕಂಡರೆ ಕಾಲುನೋವು

ಮಾಡಿದುಣ್ಣೊ ಮಾರಾಯ

ಆಕಾಶ ನೋಡೊದಕ್ಕೆ ನೂಕುನುಗ್ಗಲೆ ?

ವಿವಿಧ ರೋಗಗಳಿಗೆ ಮದ್ದಿವೆ, ಹೊಟ್ಟೆ ಉರಿಗೆ ಮದ್ದಿಲ್ಲ.

ನೆಚ್ಚಿನೆಮ್ಮೃ ಕೋಣನನ್ನೀಯಿತು

ತರುಬಿದವಗೂ ಓಡಿದವಗೂ ಸರಿಪಾಲು ಕಷ್ಟ

| | |
|---|---|
| **Download**: Kannadapdf.com | https://kannadapdf.com/ |

ಬೇಲಿನೆ ಎದ್ದು ಹೊಲ ಮೇಯಿತಂತೆ

ತನಗೆ ಇಲ್ಲ ಕೂಸಿಗೇನು ಹೊದ್ದಿಸಲಿ

ಇಕ್ಕಲಾರದ ಕೈ ಎಂಜಲು

ಕುಂಬಾರನ ಮಗಳು ಲಾಭ ಬಂದ ಹೊರತು ಮಡಿಕೆ ಒಡೆಯುವುದಿಲ್ಲ.

ಕೆಲಸವಿಲ್ಲದ ಆಚಾರಿ ಮಗನ ತಲೆ ಕೆತ್ತಿದನಂತೆ

ಮನೆ, ಮನ ಒಡೆದರೆ ಅಂಟಿಸಲಾಗದ ಕನ್ನಡಿಯಂತೆ.

ತಳಾ ಬಿಟ್ಟು ಬಂಡಿ ಹಾರದು

ತಲೆಗೆ ಬಿದ್ದ ನೀರು ಕಾಲಿಗೆ ಬೀಳದೆ ಇರುತ್ತದೆಯೇ?

ಹೊಸ ವೈದ್ಯನಿಗಿಂತ ಹಳೆ ರೋಗಿಯೇ ಮೇಲು

ಹುಣಸೆ ಮರ ಮುಪ್ಪಾದರೂ ಹುಳಿ ಮುಪ್ಪಲ್ಲ

ಕತೆ ಹೇಳೋಕೆ ಹ್ಞಂ-ಗುಟ್ಟೋರಿರಬೇಕು, ನೆಟ್ಟಗೆ ಬಾಳೋಕೆ ಛೀ-ಗುಟ್ಟೋರಿರಬೇಕು

ಅರಸು ಆದೀಕ (=ಆದಾಯ) ತಿಂದ, ಪರದಾನಿ ಹೂಸು ಕುಡಿದ

ಹಾಲಿದ್ದ ಕಂಡಲ್ಲಿ ಬೆಕ್ಕು ಹೇಲು ಕಂಡಲ್ಲಿ ನಾಯಿ

ಸಾಲ ಕೊಳ್ಳುವಾಗ ಒಂದುರಾಗ, ಸಾಲ ಹೊಳ್ಳಿ ಕೊಡುವಾಗ ನಾನಾರಾಗ

ಹಲ್ಲುಬಿದ್ದ ಮುದುಕಿ ಎಲ್ಲಿ ಬಿದ್ದರೇನು

ಶೀಲವಂತರ ಓಣೀಲಿ ಕೋಳಿ ಮಾಯ ಆದವಂತೆ

ತಾ ನೊಂದಂತೆ ಬೇರೇರ ನೋವನ್ನೂ ಅರಿಯಬೇಕು

ಒಂದು ಬಿಟ್ಟು ಇನ್ನೊಂದು ಕಟ್ಕೊಂಡ್ರಂತೆ

ಸಾಲ ಕೊಳ್ಳುವಾಗ ಹಾಲು ಕುಡಿದಂತೆ, ಸಾಲ ತಿರುಗಿ ಕೊಡುವಾಗ ಕಿಬ್ಬದಿ ಕೀಲು ಮುರಿದಂತೆ

ಹೆಣ್ಣು ಚಂದ,ಕಣ್ಣು ಕುರುಡು

ಕಣ್ಣರಿಯದಿದ್ದರೂ ಕರುಳರಿಯುತ್ತದೆ

ನಿನ್ನಿಂದ ಆದ ಪಾಪ, ಅದೇ ನಿನಗೆ ಶಾಪ.

ತಿನ್ನೋದು ತವಡು ನಡೆಯೋದು ವೈಯ್ಯಾರ

ದಾಕ್ಷಿಣ್ಯಕ್ಕೆ ಬಸಿರಾಗೋದು

ಗದ್ದೆ ಸುಟ್ಟರೂ ಹಾಳಾಗದು ಗಾದೆ.

ಒಕ್ಕಣ್ಣ ತನಗೆ ಹತ್ತು ಕಣ್ಣು ಅಂತಿದ್ನಂತೆ.

ಒಂದೊಂದು ಕಾಲಕ್ಕೆ ಒಂದೊಂದು ಪರಿ

ಅಗಸನ ಸಿಟ್ಟು ಅನ್ಯರ ವಸ್ತ್ರದ ಮೇಲೆ.

ಕಳೆದುಕೊಂಡ ವಸ್ತುವನ್ನು ಕಳೆದುಹೋದ ಜಾಗದಲ್ಲೇ ಹುಡುಕು

ಪಾದಕ್ಕೆ ತಕ್ಕಂತೆ ಚಪ್ಪಲಿ ತಗೊ, ಬಾಗಿಲಿನೆತ್ತರಕ್ಕೆ ತಕ್ಕಂತೆ ಬಗ್ಗಿ ನಡಿ.

ಮಹಡಿ ಹತ್ತಿದ ಮೇಲೆ ಏಣಿ ಒದ್ದ ಹಾಗೆ

ತಿಪ್ಪೇ ಮೇಲಣ ಅರಿವೆಯಾದರೂ ಕಾಲಿಗೆ ಕಟ್ಟಿದರೆ ಬಿರುದು

ಬೆರಳು ತೋರುದ್ರೆ ಅಂಗೈನೇ ನುಂಗಿದಂತೆ

ಪಡುವಣ ಮನೆಗೆ ಮೂಡಣ ದೀಪ

ಸತ್ತವರಿಗೆ ಸಂಗವಿಲ್ಲ, ಕೆಟ್ಟವರಿಗೆ ನೆಂಟರಿಲ್ಲ.

ಹುಟ್ಟು ಗುಣ ಸುಟ್ಟರೂ ಹೊಗೊದಿಲ್ಲ

ಕಾಡಿಗೆ ಹೋಗೋ ವಯಸ್ಸಿನಲ್ಲಿ ಬ್ರಾಹ್ಮಣ ಓಂ ಕಲಿತ

ಕುಲ ಸೋಸಿ ಹೆಣ್ಣು ತಗೊಂಡು ಬಾ ; ಜಲ ಸೋಸಿ ನೀರು ತಗೊಂಡು ಬಾ

ಕ್ರಮ ಕಾಣದ ನಾಯಿ ಕಪಾಳೆ ನೆಕ್ತು

ಕೊಟ್ಟ ಹೆಣ್ಣು ಕುಲದಿಂದ ಹೊರಗೆ

| | |
|---|---|
| **Download**: Kannadapdf.com | https://kannadapdf.com/ |

ಪಾಪಿ ಸಮುದ್ರ ಹೊಕ್ರೂ ಮೊಣಕಾಲುದ್ದ ನೀರು

ಅಳಿದೂರಿಗೆ ಉಳಿದವನೇ ಗೌಡ

ಯಂಕ,ಸೀನ,ನೊಣ ಅಂತ ಮನೇಲಿ ಮೂರೇ ಜನ

ಹಾಗಲ ಕಾಯಿಗೆ ಬೇವಿನ ಕಾಯಿ ಸಾಕ್ಷಿ

ಎಲೆ ಎತ್ತೋ ಜಾಣ ಅಂದರೆ ಉಂಡೋರೆಷ್ಟು ಮಂದಿ ಅಂದನಂತೆ

ಮಾತಿಗೊಂದು ಮಾತು ಬಂತು ವಿಧಿ ಬಂದು ಆತುಕೊಣ್ತು

ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ

ಹುಣ್ಣು ಮಾದರೂ ಕಲೆ ಮಾದೀತೇ

ಆಸೆ ಹೆಚ್ಚಿತು ಆಯಸ್ಸು ಕಮ್ಮಿ ಆಯಿತು

ಯಾರ ತೋಟದ ಹುಲ್ಲು ಮೇದಾದ್ರೂ ನಮ್ಮ ಕರು ದೊಡ್ಡದಾಗಲಿ.

ಮುಚ್ಚಿ ಹೇಳಿದರೆ ಒಗಟು ಬಿಚ್ಚಿ ಹೇಳಿದರೆ ಒರಟು

ಮದುವೆಯಾಗೋ ಗುಂಡ ಅಂದ್ರೆ ನೀನೇ ನನ್ನ ಹೆಂಡ್ತಿ ಅಂದ

ಸಾವಿರ ಸುಳ್ಳು ಹೇಳಿ ಒಂದು ಮದುವೆ ಮಾಡು

ಬೇಲಿಯೇ ಎದ್ದು ಹೊಲ ಮೇದಂತೆ

ನುಡಿಯೊಳು ಹೊಳೆವುದು ನಾಡಿನ ನಡವಳಿ.

ಬಾಡಿಗೆ ಎತ್ತು ಅಂತ ಹೊಡಿದು ಬಡಿಬಾರದು.

ತಪಸ್ಸಿಗೆಂತ ಹೋಗಿ ಕುಪ್ಪಸಾ ಕಳಕೊಂಡ

ತನ್ನ ಮರ್ಯಾದೆ ಕೆಟ್ಟವ ಪರರ ಮರ್ಯಾದೆ ಇಟ್ಟಾನೆ?

ಒಂದು ಕಣ್ಣಿಗೆ ಬೆಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ

ಅಜ್ಜ! ಮದುವೆ ಅಂದ್ರೆ ನನಗೋ ಅಂದ

| | |
|---|---|
| **Download**: Kannadapdf.com | https://kannadapdf.com/ |

ಸಮಯಕ್ಕಾದವನೆ ನೆಂಟ ಕೆಲಸಕ್ಕಾದವನೆ ಬಂಟ

ತಿರಿದುಂಬುವ ಭಟ್ಟ ದಕ್ಷಿಣೆಯಾದರೂ ಬಿಟ್ಟಾನು ಭೋಜನ ಸಿಕ್ಕಿದರೆ ಬಿಡಲೊಲ್ಲ

ಮಾಡಬಾರದ್ದು ಮಾಡಿದರೆ, ಆಗಬಾರದ್ದು ಆಗತ್ತೆ

ತಾಳ ತಪ್ಪಿದ ಬಾಳು, ತಾಳಲಾರದ ಗೋಳು

ಇದ್ದ ಕಾಲದಲ್ಲಿ ಅಟ್ಟುಣ್ಣ ಬೇಕು

ಅಡ್ಡಗೋಡೆಯ ಮೇಲೆ ದೀಪ ಇಟ್ಟ ಹಾಗೆ.

ಹಾವು ಸಾಯಬಾರದು, ಕೋಲು ಮುರೀಬಾರದು.

ಹಿತ್ತಲ ಗಿಡ ಮದ್ದಲ್ಲ ಹತ್ತರ ಮಾತು ರುಚಿಯಲ್ಲ

ಸಿದ್ದಿಗಿಂತ ಬಲವಿಲ್ಲ ಬುದ್ಧಿಗಿಂತ ಹಿರಿದಿಲ್ಲ

ತಕ್ಕವನಲ್ಲಿ ಹೊಕ್ಕಿದ್ದರೆ ತಕ್ಕಷ್ಟಾದರೂ ಸಿಕ್ಕುವುದು

ಕುಡಿಯೋ ನೀರಿನಲ್ಲಿ ಬೆರಳಾಡಿಸೋ ಬುದ್ಧಿ

ಬಾಯಿಲ್ಲದೋನು ಬರದೇಲಿ ಸತ್ತನಂತೆ

ದೇವನೊಬ್ಬ ನಾಮ ಹಲವು

ತುಟಿ ಸುಮ್ಮನಿದ್ದರೂ ಹೊಟ್ಟೆ ಸುಮ್ಮನಿರದು

ಚೇಳಿನ ಮಂತ್ರ ಅರಿಯದವ ಹಾವಿನ ಹುತ್ತಕ್ಕೆ ಕೈ ಹಾಕಿದ ಹಾಗೆ

ಕೆಟ್ಟದ್ದನ್ನು ಬಯಸಬೇಡ, ಒಳ್ಳೆಯದನ್ನು ಬಿಡಬೇಡ.

ಹೋದ ಪುತ್ತ ಬಂದ ಪುತ್ತ ಪುಟ್ಟನ ಕಾಲಿಗೆ ನೀರಿಲ್ಲ

ಹೊಟ್ಟೆ ತುಂಬಿದೋರಿಗೆ ಹುಡುಗಾಟ, ಹೊಟ್ಟೆಗಿಲ್ಲದೋರಿಗೆ ಮಿಡುಕಾಟ

ಆರಕ್ಕೇರಲ್ಲ, ಮೂರಕ್ಕಿಳಿಯಲ್ಲ

ಜನ ಮರುಳೋ ಜಾತ್ರೆ ಮರುಳೋ



| | |
|---|---|
| **Download**: Kannadapdf.com | https://kannadapdf.com/ |

ಬೆಟ್ಟ ಅಗೆದು ಇಲಿ ಹಿಡಿದಂತೆ

ಆಡುತ್ತಾ ಆಡುತ್ತಾ ಭಾಷೆ, ಹಾಡುತ್ತಾ ಹಾಡುತ್ತಾ ರಾಗ

ಉಂಡೂ ಹೋದ; ಕೊಂಡೂ ಹೋದ

ಮರ ಹುಟ್ಟಿದಲ್ಲೇ ಮರಣ. ಮನುಷ್ಯ ಹೋದಲ್ಲೇ ಮರಣ

ಹಣ್ಣು ತಿಂದೋನು ನುಣುಚಿ ಕೊಂಡ ಸಿಪ್ಪೆ ತಿಂದೋನು ಸಿಗ್ಗಾಕೊಂಡ

ದುಡ್ಡಿಗಿಂತ ದೊಡ್ಡ ಹೆಸರೇ ಉತ್ತಮ.

ಕೈ ಕೆಸರಾದರೆ ಬಾಯಿ ಮೊಸರು.

ದುಷ್ಟರಿಂದ ದೂರವಿರು

ಒಳ್ಳಿಹ ಬಳ್ಳಿ ಕಳ್ಳಿಯ ಹಬ್ಬಿತು

ಬಾಲೇರ ಮನಸ್ಸು ನೆಲೆಯಿಲ್ಲ

ಅಷ್ಟು ಕಂಡ್ಯ ಅಮಾಸೆ ಕಂಡ್ಯ ; ಹೊಟ್ಟೆ ನೋವಲ್ಲಿ ಕಂಡ್ಯ ಹಾಲು ಅನ್ನವ

ಇರುವೆಗೆ ಇರುವೆ ಮೈ ಭಾರ,ಆನೆಗೆ ಆನೆ ಮೈ ಭಾರ

ಯಥಾ ರಾಜಾ ತಥಾ ಪ್ರಜಾ

ಅಂಗೈ ಹುಣ್ಣಿಗೆ ಕನ್ನಡಿ ಬೇಕೆ.

ನಮಾಜು ಮಾಡಲು ಹೋಗಿ ಮಸೀದಿ ಕೆಡವಿಕೊಂಡ ಹಾಗೆ

ಅಜ್ಜಿ ಸಾಕಿದ ಮಗ ಬೊಜ್ಜಕ್ಕೂ ಬಾರದು

ನಿಷ್ಠೆ ಇಲ್ಲದವನಿಗೆ ದೈವ ಬಟ್ಟಬಯಲು

ಬಡವ ನೀ ಸೆಣಸಿ ಕೆಡಬೇಡ

ಮೂರು ವರ್ಷದ ಬುದ್ಧಿ ನೂರು ವರುಷದ ತನಕ.

ನವಿಲಾಡಿತು ಅಂತ ಕೆಂಬೂತ ಪುಕ್ಕ ತೆರೆಯಿತು

| | |
|---|---|
| **Download**: Kannadapdf.com | https://kannadapdf.com/ |

ಉಣ್ಣು ಬಾ ಅಂದ್ರೆ, ಇರಿ ಬಾ ಅಂದ್ರಂತೆ

ಯಾರದೋ ದುಡ್ಡು; ಎಲ್ಲಮ್ಮನ ಜಾತ್ರೆ

ತಟಸ್ಥನಾದವನಿಗೆ ತಂಟೆಯೇನು?

ಯುದ್ಧ ಕಾಲದಲ್ಲಿ ಶಸ್ತ್ರಾಭ್ಯಾಸ ಮುದ್ದೆ ಉಣ್ತಾ ಮಜ್ಜಿಗೆ ಓಡಾಟ

ಕಣ್ಣೆರಡಾದರೂ ನೋಟ ಒಂದೇ

ಹುಚ್ಚರ ಮದುವೆಯಲ್ಲಿ ಉನ್ನೋನೆ ಜಾಣ.

ತುಟ್ಟಿಯಾದರೂ ಹೊಟ್ಟೆ ಕೇಳದು

ಕಲ್ತ ಕೈ ಕದ್ದಲ್ಲದೆ ಬಿಡದು

ಚಾಡಿಕೋರನಿಗೆ ಊರೆಲ್ಲ ನೆಂಟರು.

ವೈರವಿದ್ದವನ ಕರೆದು ಮುಖಕ್ಷೌರ ಮಾಡಿಸಿಕೊಂಡಹಾಗೆ.

ತಮ್ಮನೇಲಿ ಹೆಗ್ಗಣ ಸತ್ತು ಬಿದ್ದಿದ್ದರೂ ಬೇರೇ ಮನೇ ಸತ್ತ ನೊಣದ ಕಡೆಗೆ ಬೆಟ್ಟು ಮಾಡಿದರು

ತಾನು ಸಾಯಬೇಕು ಸ್ವರ್ಗಾ ಪಡೆಯಬೇಕು

ತಪ್ಪನೆ ಬಾ (=ತಕ್ಷಣ ಬಾ ) ಅಂದ್ರೆ ತಬ್ಬಲಿಕ್ಕೆ ಬಂದ ಹಾಗೆ

ಸಂತೆ ಸೇರೋಕೆ ಮೊದಲು ಗಂಟು ಕಳ್ಳರು ಸೇರಿದರು

ಗುಡ್ಡ ಕಡಿದು ಹಳ್ಳ ತುಂಬಿಸಿ ನೆಲ ಸಮ ಮಾಡಿದ ಹಾಗೆ

ವಜ್ರಕ್ಕೆ ಸಾಣೆ ಹಿಡಿದಂತೆ

ಬೆಲ್ಲದ ಸಿಪಾಯಿ ಮಾಡಿ ಇರುವೆ ಹತ್ತರ ಕಳಿಸಿದ

ಆರು ಯತ್ನ ತನ್ನದು, ಏಳನೇದು ದೇವರಿಚ್ಛೆ

ನಿಯತ್ತಿಲ್ಲದೋರಿಗೆ ಬರಕತ್ತಿಲ್ಲ

ಸ್ವಾರ್ಥ ಉಳಿಸಿದವ ಪಾಪಾತ್ಮ, ನಿಸ್ವಾರ್ಥ ಗಳಿಸಿದವ ಪುಣ್ಯಾತ್ಮ.

| | |
|---|---|
| **Download**: Kannadapdf.com | https://kannadapdf.com/ |

ಕಂತೆಗೆ ತಕ್ಕ ಬೊಂತೆ

ಹಾರುವ ಆಳಲ್ಲ, ಬಾಳೆ ದಡಿಯಲ್ಲ

ಮಳ್ಳೀ ಮಳ್ಳಿ ಮಂಚಕ್ಕೆ ಎಷ್ಟು ಕಾಲು ಅಂದ್ರೆ, ಮೂರು ಮತ್ತೊಂದು ಅಂದ್ಲಂತೆ

ಹಸಿ ಗೋಡೆ ಮೇಲೆ ಹರಳು ಎಸೆದಂತೆ.

ಹುಟ್ಟಿದ ಮನೆ ಹೋಳಿಹುಣ್ಣಿಮೆ ಕೊಟ್ಟ ಮನೆ ಶಿವರಾತ್ರಿ

ಹೆಣ್ಣಿನ ಬಾಳು ಕಣ್ಣೀರಿನ ಗೋಳು

ತಾಳಿದವನು ಬಾಳಿಯಾನು

ಆಲಸ್ಯಂ ಅಮೃತಂ ವಿಷಂ

ಅರೆಗೊಡದ ಅಬ್ಬರವೇ ಬಹಳ.

ಹೆಣ್ಣು ಹೊನ್ನು ಮಣ್ಣು ಇನ್ನೊಬರ ಕೈ ಸೇರಿದರೆ ಹೋದಂತೆ

ಮೊಂಡ ಕೊಡಲಿ ರಟ್ಟೆಗೆ ಮೂಲ

ಊರೆಲ್ಲ ಸೂರೆ ಆದ ಮೇಲೆ ಕೋಟೆ ಬಾಗಿಲ ಮುಚ್ಚಿದರು

ಹರಿದಿದ್ದೇ ಹಳ್ಳ ನಿಂತಿದ್ದೇ ತೀರ್ಥ

ಕಳ್ಳನ ಕೈಯಲ್ಲಿ ಕೀಲಿಕೈ ಕೊಟ್ಟಂತೆ

ಕೈ ಕೆಸರಾದರೆ ಬಾಯಿ ಮೊಸರು

ತಮ್ಮನ ಸಂಗಡ ತಿಮ್ಮ ಬಂದರೆ ತಂಗಳನ್ನವೇ ಗತಿ

ದೇಶ ತಿರುಗಬೇಕು, ಭಾಷೆ ಕಲಿಯಬೇಕು.

ಅಡಿಗೆ ಬಿದ್ದರೂ ಮೀಸೆ ಮೇಲೆ

ಕೊಂದ ಪಾಪ ತಿಂದು ಪರಿಹಾರ

ಯಾರೂ ಇಲ್ಲದ ಮನೆಗೆ ನಾನು ಜೋಗಪ್ಪ ಅಂದ



| | |
|---|---|
| **Download**: Kannadapdf.com | https://kannadapdf.com/ |

ಪ್ರದಕ್ಷಿಣೆ ಹಾಕಿದರೆ ಪ್ರಯೋಜನವಿಲ್ಲ, ದಕ್ಷಿಣೆ ಹಾಕಿದರೇಯ ತೀರ್ಥ ಸಿಗೋದು

ಸಮಯಕ್ಕಿಲ್ಲದ ನೆರವು ಸಾವಿರ ಇದ್ದರೂ ಎರವು

ಆಕಳು ಕಪ್ಪಾದರೂ ಹಾಲು ಕಪ್ಪೆ ?

ಹರೆ ಬಡಿದರೂ ಮದುವೆ ಮೊರ ಬಡಿದರೂ ಮದುವೆ

ತಿರುಕನ ಬಳಿಗೆ ತಿರುಕ ಹೋದರೆ ಮರುಕ ತಾ ಬರುವುದೇ?

ಹಗ್ಗ ಹರಿಯಲಿಲ್ಲ ಕೋಲು ಮುರಿಯಲಿಲ್ಲ

ಹಾದೀಲಿ ಹೋಗುವವನ ಕೆಣಕ ಅವನು ಬಂದು ನಿನ್ನ ತದಕ

ಅಂಕೆಯಲ್ಲಿದ್ದ ಹೆಣ್ಣು, ಮಜ್ಜಿಗೆಯಲ್ಲಿದ್ದ ಬೆಣ್ಣೆ ಕೆಡೊಲ್ಲ

ಹಾಲಿಗಿಂತ ಕೆನೆ ರುಚಿ

ನಿನ್ನಲ್ಲಿ ನೀ ಹುಡುಕು, ಅರಿಷಡ್ವರ್ಗಗಳ ಹೊರ ಹಾಕು.

ಧರ್ಮಕ್ಕೆ ದಟ್ಟಿ ಕೊಟ್ಟರೆ ಹಿತ್ತಲಿಗೆ ಹೋಗಿ ಮೊಳ ಹಾಕಿದರು

ಉರಗಕ್ಕೆ ಹಾಲೆರೆದರೆ ಅದು ತನ್ನ ಗರಳ್ವ ಬಿಡಬಲ್ಲುದೇ

ಕಟ್ಟಿದ ಕೆರೆಗೆ ಕೋಡಿ ತಪ್ಪಲ್ಲ, ಹುಟ್ಟಿದ ಮನೆಗೆ ಬೇರೆ ತಪ್ಪಲ್ಲ

ಮಳೇ ನೀರ ಬಿಟ್ಟು ಮಂಜಿನ ನೀರಿಗೆ ಕೈ ಒಡ್ಡಿದಂತೆ.

ಆಳಿನ ಮೇಲೆ ಆಳು ಬಿದ್ದು ದೋಣಿ ಬರಿದಾಯ್ತು

ಹರ ಮುನಿದರೆ ಗುರು ಕಾಯ್ವ

ಅಳಿಯ ಅಲ್ಲ,ಮಗಳ ಗಂಡ

ಸಣ್ಣವರ ನೆರಳು ಉದ್ದವಾದಾಗ ಸೂರ್ಯನಿಗೂ ಮುಳುಗುವ ಕಾಲ

ಹಾವಿಗೆ ಹಾಲೆರೆದರೇನು ಫಲ

ಒಲ್ಲದ ಗಂಡನಿಗೆ ಮೊಸರಲ್ಲಿ ಕಲ್ಲು.



| | |
|---|---|
| **Download**: Kannadapdf.com | https://kannadapdf.com/ |

ಹೋದೆಯಾ ಪಿಶಾಚಿ ಅಂದರೆ ಬಂದೆ ಗವಾಕ್ಷೀಲಿ ಅಂದಂತೆ

ಹೇಳಿಕೆ ಮಾತು ಕೇಳಿ ಹೆಂಡ್ರನ್ನ ಬಿಟ್ಟ

ಸತ್ತು ಕೊಳ್ಳೋ ಸೊರ್ಗಕ್ಕಿಂತ ಬದುಕಿ ಕೊಳ್ಳೋ ನರಕ ಲೇಸು

ಗಂಧ ಹೆಚ್ಚಾಯ್ತು ಅಂತ ಎಲ್ಲೆಲ್ಲಿಗೋ ಬಳಿದುಕೊಂಡರಂತೆ

ಡಾವರ ಹತ್ತಿದಾಗ ದೇವರ ಧ್ಯಾನ

ಹಾದರ ಹಾಲು ಸಕ್ಕರೆಯಂತೆ,ಬಯಲಾದರೆ, ಬೇವಿನ ಸಾರದಂತೆ

ಹೆಣ್ಣು ಹಡೆದವರ ಮನೆ ನುಣ್ಣಗೆ ಗಂಡು ಹಡೆದವರ ಮನೆ ತಣ್ಣಗೆ

ಅಕ್ಕ ನನ್ನವಳಾದ್ರೆ ಬಾವ ನನ್ನವನೇನು

ಬಿದ್ದ ಪೆಟ್ಟಿಗಿಂತ ನಕ್ಕ ಪೆಟ್ಟು ಹೆಚ್ಚು.

ಶಿವಪೂಜೇಲಿ ಕರಡಿ ಬಿಟ್ಟ ಹಾಗೆ.

ಅರಸು ಒಲಿದರೆ ಸಿರಿ ದೆಸೆಯಾಯ್ತು

ತನ್ನ ಬೆನ್ನು ತಾನೇ ತಟ್ಟಿಕೊಂಡ ಹಾಗೆ

ಪಾಲಿಗೆ ಬಂದದ್ದು ಪಂಚಾಮೃತ

ಮಾಡಿದರೆ ಮನೆ ; ಹೂಡಿದರೆ ಒಲೆ

ಹುಣ್ಣು ಮಾದರೂ ಕಲೆ ಮಾದೀತೇ.

ಮಳೆಗಾಲದೇಲಿ ಚಿಗಿಯೊದಿಲ್ಲ ಬೇಸಿಗೇಲಿ ಒಣಗೂದಿಲ್ಲ

ಊರು ಬಾವಿಗೆ ಬಿದ್ದರೂ, ಊರ ಬಾಯಿಗೆ ಬೀಳಬಾರದು

ಸಂಸಾರಿ ಸಾವಾಸ ಮಾಡಿ ಸನ್ಯಾಸಿ ಕೆಟ್ಟ

ಹುಳ್ಳಿಕಾಳೂ ತಿನ್ನೊ ಮುಕ್ಕ ಒಬ್ಬಟ್ಟಿನ ಹೂರ್ಣ ಕೇಳಿದಂಗೆ



| | |
|---|---|
| **Download**: Kannadapdf.com | https://kannadapdf.com/ |

ಒಂದು ಹೊತ್ತು ಉಂಡವ ಯೋಗಿ ಎರಡು ಹೊತ್ತು ಉಂಡವ ಭೋಗಿ ಮೂರು ಹೊತ್ತು ಉಂಡವ ರೋಗಿ ನಾಲ್ಕು ಹೊತ್ತು ಉಂಡವ ಎತ್ತುಕೊಂಡು ಹೋಗಿ

ಬಾಯಲ್ಲಿ ಬೆಣ್ಣೆ; ಬಗಲಲ್ಲಿ ದೊಣ್ಣೆ.

ತಿರುದುಂಬುವುದಕ್ಕೆ ಬೀದಿ ಹಂಚಿಕೊಂಡ ಹಾಗೆ

ಕೆಟ್ಟು ಪಟ್ಟಣ ಸೇರು

ಹುಚ್ಚು ಬಿಟ್ಟ ಹೊರತು ಮದುವೆ ಆಗೋಲ್ಲ; ಮದುವೆ ಆದ ಹೊರತು ಹುಚ್ಚು ಬಿಡಲ್ಲ

ಕರೆದು ಹೆಣ್ಣು ಕೊಟ್ಟರೆ ಮಲರೋಗ ಬಂತಂತೆ.

ಬೆಲ್ಲವಿಲ್ಲದಿದ್ದರೆ ಬೆಲ್ಲದಂಥ ಮಾತೂ ಇಲ್ಲವೇ?

ಗುರುವಿಲ್ಲದೇ ಮಠವಿಲ್ಲ, ಹಿರಿಯರಿಲ್ಲದೆ ಮನೆಯಿಲ್ಲ.

ಸಂತೇಲಿ ಮಂತ್ರ ಹೇಳಿದಂಗೆ

ನಿಸ್ಸಹಾಯಕರ ಮೇಲೆ ಹುಲ್ಲುಕಡ್ಡಿ ಸಹ ಭುಸುಗುಡುತ್ತದೆ

ಇದ್ದ ಮಕ್ಕಳೇ ಎಣ್ಣೆ ಬೆಣ್ಣೆ ಕಾಣದಿರುವಾಗ ಮತ್ತೊಂದು ಕೊಡೋ ದೇವರೇ ಅಂದಂತೆ

ಬಡವನಿಗೆ ಉಳಿದಷ್ಟೆ ಅಭಿಮಾನ

ಮೇಲೆ ಬಿದ್ದು ಬಂದೋಳು ಮೂರು ಕಾಸಿಗೂ ಕಡೆ

ಹೆಣ್ಣು ಮಕ್ಕಳು ಇದ್ದ ಮನೆ ಕನ್ನಡಿಯಂಗೆ

ಉಪ್ಪಿಕ್ಕಿದವರನ್ನು ಮುಪ್ಪಿನ ತನಕ ನೆನೆ

ಬಾಯಿದ್ದೋರು ಬರಗಾಲದಲ್ಲೂ ಬದುಕಿದರು

ಸಿರಿತನ ಇರೂತನ ಪಿರಿಪಿರಿ ಸಿರಿಹೋದ ಮರುದಿನ ಕಿರಿಕಿರಿ

ತೀರ್ಥಕ್ಕೆ ಥಂಡಿ, ಪ್ರಸಾದಕ್ಕೆ ಅಜೀರ್ಣ , ಮಂಗಳಾರತಿಗೆ ಉಷ್ಣ (ನಾಜೂಕು ದೇಹಸ್ಥಿತಿ)

ನಿನ್ನಲ್ಲಿರುವ ಮಾನ ನಿನಗೆ ಕೊಡುವುದು ಬಹುಮಾನ.


| | |
|---|---|
| **Download**: Kannadapdf.com | https://kannadapdf.com/ |

ಹಾಲು ಕುಡಿದ ಮಕ್ಕಳೇ ಬದುಕಲಿಲ್ಲ ವಿಷ ಕುಡಿದ ಮಕ್ಕಳು ಬದುಕ್ಯಾರೆ

ಊರಿಗಾಗದ ಗೌಡ, ಮೇಲೆರಗುವ ಗಿಡುಗ

ಹಾಲು ಕುಡಿದ ಮಕ್ಕಳೇ ಬದುಕೋಲ್ಲ, ಇನ್ನು ವಿಷ ಕುಡಿದ ಮಕ್ಕಳು ಬದುಕುತ್ತವೆಯೇ

ತಾಳೆಮರ ದೊಡ್ಡದಾದರೂ ತಾಳೆ ಹೂವಿಗೆ ಸರಿಯಾದೀತೇ

ಆಸೆಯೇ ದು:ಖಕ್ಕೆ ಮೂಲ

ವೇದ ಸುಳ್ಳಾದರು ಗಾದೆ ಸುಳ್ಳಾಗದು.

ಮಂತ್ರಿಇಲ್ಲದ ರಾಜ್ಯ ಕೀಲು ಮುರಿದ ಯಂತ್ರದಂತೆ

ಕಾಸೂ ಹಾಳು ತಲೆಯೂ ಬೋಳು.

ಇಷ್ಟನ್ನು ಕಂಡೆಯಾ ಕೃಷ್ಣಂಭಟ್ಟಾ ಅಂದರೆ, ಮುಪ್ಪಿನ ಕಾಲಕ್ಕೆ ಮೂರು ಜನ ಹೆಂಡಿರು

ಬಿರಿಯಾ ಉಂಡ ಬ್ರಾಹ್ಮಣ ಭಿಕ್ಷೆ ಬೇಡಿದ

ಚಿಂತೆ ಇಲ್ಲದವನಿಗೆ ಸಂತೆಯಲ್ಲೂ ನಿದ್ದೆ ಬಂತು

ಗೌರಿ ಹಬ್ಬಕ್ಕೆ ಬಂದ ಗತಿಗೆಟ್ಟ ಅಳಿಯ

ಓದೋದು ಕಾಶಿ ಖಂಡ, ತಿನ್ನೋದು ಮಶಿ ಕೆಂಡ

ಯಾರದೊ ದುಡ್ಡಿನಲ್ಲಿ ಯೆಲ್ಲಮನ್ನ ಜಾತ್ರೆ

ಕಟ್ಟಿಕೊಂಡವಳು ಕಡೇ ತನಕ; ಇಟ್ಟುಕೊಂಡವಳು ಇರೋ ತನಕ

ಲಕುಮಿ ತೊಲಗಿದ ಬಳಿಕ ಕುಲ ವೀರವಿದ್ದು ಫಲವಿಲ್ಲ

ಕಾಗೆಯ ಕೈಯಲ್ಲಿ ಕೊಟ್ಟರೆ ಕಾರಭಾರ, ಅದು ಮಾಡುವುದೇ ಉಪಕಾರ?

ಹಣವಿದ್ದ ಗಂಡನನ್ನು ಮದುವೆಯಾದರೂ ಋಣವಿದ್ದಷ್ಟೇ

ತಾಳು ಬಡಿದರೆ ಕಾಳು ಸಿಕ್ಕೀತೇ

ಡಾವರ ಹತ್ತಿದಾಗ ದೇವರ ಧ್ಯಾನ

ಸೆಟ್ಟಿ ಸಾಲ ಸತ್ತ ಮೇಲೆ ತಿಳೀತು

ರಾಯ ಸತ್ತರೂ ಹೆಣ ; ನಾಯಿ ಸತ್ತರೂ ಹೆಣ

ಊಟವೆಂದರೆ ಊರು ಬಿಟ್ಟುಹೋದಂತೆ.

ತನ್ನ ಓಣಿಯಲ್ಲಿ ನಾಯಿಯೂ ಸಿಂಹ.

ಸಂತೆ ಹೊತ್ತಿಗೆ ಮೂರು ಮೊಳ ನೇದ ಹಾಗೆ

ಸಡಗರದಲ್ಲಿ ಮದುವೆ ಮಾಡಿ ಈ ಹೆಣ್ಣು ಯಾರು ಅಂದಳಂತೆ ಅತ್ತೆ

ವಿದ್ಯಾವಂತನಾದರೆ ಜಗತ್ತಿನ ಆಡಳಿತವನ್ನೇ ನಡೆಸಬಹುದು.

ಹೊರೆ ಹೊತ್ತುಕೊಂಡು ಗ್ರಹಗತಿ ಕೇಳ್ದಂದೆ

ಕಚ್ಚುವ ನಾಯಿ ಬೊಗಳದು ಬೊಗಳುವ ನಾಯಿ ಕಚ್ಚದು

ಎರಡೂ ಕೈ ತಟ್ಟಿದರೆ ಸದ್ದು

ಎಂಟು ವರ್ಷಕ್ಕೆ ನನ್ನ ಮಗ ದಂಟಾದ

ಸಾಯೋ ತನಕ ಶನಿ ಕಾಟ ಆದ್ರೆ ಬಾಳೋದು ಯಾವಾಗ

ಹಾರೋ ಹಕ್ಕಿಯ ಪುಕ್ಕ ಎಣಿಸಿದಂತೆ.

ಭಾವಿಸಿದರೆ ಬಳಗ, ಕೂಡಿಸಿದರೆ ಕಾಸು.

ಸತ್ತವರಿಗೆ ಸಂಗವಿಲ್ಲ ಕೆಟ್ಟವರಿಗೆ ನೆಂಟರಿಲ್ಲ

ಕಯ್ಯಾರೆ ಮಾಡುವ ಧರ್ಮ ಲೇಸು

ಬೆಂಕಿ ಇಲ್ಲದೆ ಹೊಗೆ ಏಳಲ್ಲ

ವೃದ್ಧ ನಾರೀ ಪತಿವ್ರತಾ

ಪರಿಚಿತರ ಮರೆಯಬೇಡ, ಅಪರಿಚಿತರ ನಂಬಬೇಡ.

ಊರ ಸುದ್ದಿ ಇದ್ದಲ್ಲಿ ತೆಗೆಯ ಬಾರದು, ಬೇವೂರ ಸುದ್ದಿ ಹೋದಲ್ಲಿ ತೆಗೆಯ ಬಾರದು


| | |
|---|---|
| **Download**: Kannadapdf.com | https://kannadapdf.com/ |

ಉಗುರಿನಲ್ಲಿ ಹೋಗೋ ಚಿಗುರಿಗೆ ಕೊಡಲಿ ಏಕೆ ?

ಅಗಸನ ಬಡಿವಾರವೆಲ್ಲ ಹೆರರ ಬಟ್ಟೆ ಮೇಲೆ

ಚಲವಾದಿಯ ಸಂಗಡ ಹಟವಾದಿ ಸೇರಿದ ಹಾಗೆ

ಆರಿದ್ರೆ ಮಳೆಯಲ್ಲಿ ಆದವನೇ ಒಡೆಯ.

ವಿನಾಶ ಕಾಲಕ್ಕೆ ವಿಪರೀತ ಬುದ್ಧಿ

ತೇದು ಇಕ್ಕಿದೋಳಿಗಿಂತ ಸಾದು ಇಕ್ಕಿದೋಳು ಹೆಚ್ಚು

ರೋಗಿ ಬಯಸಿದ್ದು ಹಾಲು-ಅನ್ನ ವೈದ್ಯ ಹೇಳಿದ್ದು ಹಾಲು-ಅನ್ನ

ಹಾಸಿಗೆ ಇದ್ದಷ್ಟು ಕಾಲು ಚಾಚು

ನರಿಗೆ ಹೇಳಿದರೆ ನರಿ ತನ್ನ ಬಾಲಕ್ಕೆ ಹೇಳಿತಂತೆ

ತನ್ನ ಹೊಟ್ಟೆ ತಾ ಹೊರೆಯದವ ಮುನ್ನಾರ ಸಲಹುವ?

ನೆತ್ತಿಯಲ್ಲಿ ಅಮೃತ ಹೊತ್ತು ಸಾವಿಗಂಜಿ ಜಗವೆಲ್ಲ ಸುತ್ತಾಡಿದ

ತಾ ಕೆಡುತ್ತಾ ಏಳು ನೆರೆ ಕೆಡಿಸಿದ ತಿಗಳಗಿತ್ತಿಯ ಬಾಯಿ ಕೆಣಕಬೇಡ

ಲಕ್ಷ್ಮಿ ಚಂಚಲೆ

ತೀಟೆ ತೀರಿದಮೇಲೆ ಲೌಡಿ ಸಂಗ ಯಾಕೆ?

ಪುರಾಣ ಹೇಳೊಕೆ; ಬದನೆಕಾಯಿ ತಿನ್ನೋಕೆ

ಒಂದು ಒಳ್ಳೇ ಮಾತಿಗೆ ಸುಳ್ಳೇ ಪ್ರಧಾನ

ವೈದ್ಯರ ಹತ್ತಿರ, ವಕೀಲರ ಹತ್ತಿರ ಸುಳ್ಳು ಹೇಳಬೇಡ

ಯೋಗಿ ತಂದದ್ದು ಯೋಗಿಗೆ, ಭೋಗಿ ತಂದದ್ದು ಭೋಗಿಗೆ

ವೇದ ಸುಳ್ಳು ಆದರು ಗಾದೆ ಸುಳ್ಳಾಗದು.

ತಲೆ ತಾಗಿದ್ದಲ್ಲದೆ ಬುದ್ಧಿ ಬಾರದು



| | |
|---|---|
| **Download**: Kannadapdf.com | https://kannadapdf.com/ |

ಸವತಿ ಸಣ್ಣವಳಲ್ಲ ದಾಯಾದಿ ಚಿಕ್ಕವನಲ್ಲ

ಸೂಜಿಯಷ್ಟು ಬಾಯಿ ಗುಡಾಣದಷ್ಟು ಹೊಟ್ಟೆ

ಕೂಸು ಹುಟ್ಟೋಕೆ ಮುಂಚೆ ಕುಲಾವಿ ಹೊಲಿಸಿದರು

ಅತ್ತ ದರಿ; ಇತ್ತ ಪುಲಿ

ಅಂಗಳದಾಗೆ ಒದ್ದು ಅಡಿಗೆ ಮನೆಯಲ್ಲಿ ಕಾಲು ಹಿಡಿದ.

ಒಲುಮೆಗೆ ನೋಟ ಬೇಟವೇ ಮೊದಲು

ಅರುಗೆಟ್ಟ ನಿದ್ದೆ ಇರಗೆಟ್ಟು ಸತ್ತಂತೆ

ನೀರಿನಲ್ಲಿ ಹೋಮ ಮಾಡಿದಂತೆ

ಸಮುದ್ರದ ನೆಂಟಸ್ತನ ; ಉಪ್ಪಿಗೆ ಬಡತನ

ಆಕಾಶ ಹರಿದು ಬೀಳುವಾಗ ಕೈ ಅಡ್ಡ ಹಿಡಿಯಬಹುದೇ ?

ಹೂಡಿದರೆ ಒಲೆ, ಮಡಿದರೆ ಮನೆ.

ಮಾತು ಬಲ್ಲವನಿಗೆ ಜಗಳವಿಲ್ಲ, ಊಟ ಬಲ್ಲವನಿಗೆ ರೋಗವಿಲ್ಲ

ಉಗಿದರೆ ತುಪ್ಪ ಕೆಡುತ್ತದೆ, ನುಂಗಿದರೆ ಗಂಟಲು ಕೆಡುತ್ತದೆ

ದುಡ್ಡನ್ನು ಕಾದಿಟ್ಟುಕೊಳ್ಳದವನು ಹಣವಂತನು ಹೇಗೆ ಆದಾನು?

ಆದ್ರೆ ಒಂದು ಅಡಿಕೆ ಮರ, ಹೋದ್ರೆ ಒಂದು ಗೋಟಡಿಕೆ

ಮೀಸೆ ಬಂದಾಗ ದೇಶ ಕಾಣದು ಮೊ.. ಬಂದಾಗ ನೆಲ ಕಾಣದು

ಇದ್ದದ್ದು ಹೋಯಿತು ಮದ್ದಿನ ಗುಣದಿಂದ

ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಹಾಕಿದರಂತೆ.

ತಿರಿಚಿನಾಪಳ್ಳಿಗೆ ತಿರಿದುಂಬೊದಕ್ಕೆ ಇಲ್ಲಿಂದ ಕೈ ಸವರಿಸಬೇಕೆ

ಕುರಿ ಕೊಬ್ಬಿದಷ್ಟು ಕುರುಬನಿಗೇ ಲಾಭ.


| | |
|---|---|
| **Download**: Kannadapdf.com | https://kannadapdf.com/ |

ಒಂದರ ಮೊದಲೊಳಗೆ ಬಂದಿದೆ ಜಗವೆಲ್ಲ

ತಿಮರು (=ಕಡಿತ, ನವೆ) ತುರಿಸಿದರೆ ಅರಸಿನ ಹಾಗೆ

ಉಂಡ ಮನೆ ಜಂತೆ ಎಣಿಸಬಾರದು

ಸಮಯಕ್ಕಾದ ಹುಲ್ಲು ಕಡ್ಡಿ ಸಹಸ್ರ ಹೊನ್ನು

ಹಾಲಿದ್ದಾಗ ಹಬ್ಬ ಮಾಡು ಹಲ್ಲಿದ್ದಾಗ ಕಡಲೆ ತಿನ್ನು

ಎಚ್ಚರ ತಪ್ಪಿ ಮಾತನಾಡಬಾರದು, ಹುಚ್ಚನಂತೆ ವರ್ತಿಸಬಾರದು.

ತನಗೆ ಇಲ್ಲದ ಮಾರಿ ತಮ್ಮಡಿಗೆ ವರಾ ಕೊಟ್ಟೀತೇ?

ಹಂಚು ಕಾಣದ ಕೈ ಕಂಚು ಕಾಣ್ತು

ರತ್ನ ತಗೊಂಡು ಹೋಗಿ ಗಾಜಿನ ತುಂಡಿಗೆ ಹೋಲಿಸಿದರು

ಸತ್ತ ಮೇಲಿನ ಸೊರ್ಗಕ್ಕಿಂತ ಇದ್ದ ನರಲೋಕ ವಾಸಿ

ಮಾತು ಬೆಳ್ಳಿ, ಮೌನ ಬಂಗಾರ

ದೇಹಕ್ಕೆ ಮುಪ್ಪಾದರೇನಾಯ್ತು, ಅಧ್ಯಯನಕ್ಕೆ ಮುಪ್ಪಿದೆಯೇ?

ತಗಲಿದವನಿಗೆ ಹಗಲಿರುಳೇನು?

ಏನೂ ಇಲ್ಲದವಗೆ ಭಯವಿಲ್ಲ

ಅಳಿಯ ಮನೆ ತೊಳಿಯ

ಆಕಾಶಕ್ಕೆ ಏಣಿ ಹಾಕಿದ ಹಾಗೆ

ಆನೆ ಬರುವುದಕ್ಕು ಮುನ್ನ ಗಂಟೆ ಸದ್ದು

ಗುಬ್ಬಿಯ ಮೇಲೆ ಬ್ರಹ್ಮಾಸ್ತ್ರ

ಅಕ್ಕಸಾಲಿಗನ ಮಗ ಚಿಮ್ಮಟ ಹಿಡಿಯುತ್ತಲೇ ಹೊನ್ನ ಕದ್ದ

ಕಾಸಿಗೊಂದು,ಕೊಸರಿಗೆರಡು

| | |
|---|---|
| **Download**: Kannadapdf.com | https://kannadapdf.com/ |

ಪಾತ್ರವರಿತು ಜಗದ ಜಾತ್ರೆಗೆ ಸಲ್ಲಬೇಕು

ಕೋಟಿ ಕೊಟ್ಟರೂ ಕೂಟ ಕರ್ಮಿಯ ದುಂದುಗವೇ ಬೇಡ

ಮಳೇ ನೀರ ಬಿಟ್ಟು ಮಂಜಿನ ನೀರಿಗೆ ಕೈ ಒಡ್ಡಿದಂತೆ

ರೇಶ್ಮೆ ಶಾಲಿನಲ್ಲಿ ಸುತ್ತಿದ ಚಪ್ಪಲಿ ಏಟು

ಊರು ಅಂದ ಮೇಲೆ ಹೊಲಗೇರಿ ಇಲ್ಲದೆ ಇರುತ್ತದೆಯೇ?

ತಾಳಿದವ ಬಾಳ್ಯಾನು

ಹತ್ತಿರಕ್ಕೆ ಬಂದರೆ ಹಡಿಕ್ ನಾತ : ದೂರದಲ್ಲಿದ್ದರೆ ಘಮಘಮ

ತಾಳಕ್ಕೆ ತಕ್ಕ ಮೇಳ

ಗಾಯದ ಮೇಲೆ ಬರೆ ಕೊಟ್ಟಂತೆ

ಭಿಕಾರಿಯಾದವ ಕಾಶಿಗೆ ಹೋದರೂ, ಭಿಕ್ಷಾನ್ನವಲ್ಲದೆ ಪಕ್ವಾನ್ನ ಉಂಡಾನೇ?

ಈಚಲ ಮರದ ಕೆಲಗೆ ಕುಳಿತು ಮಜ್ಜಿಗೆ ಕುಡಿದ ಹಾಗೆ

ಕೆಡುವ ಕಾಲಕ್ಕೆ ಬುದ್ಧಿ ಇಲ್ಲ ಮರಣ ಕಾಲಕ್ಕೆ ಮದ್ದಿಲ್ಲ

ಹೆಂಗಸರ ಬುದ್ಧಿ ಮೊಣಕಾಲ ಕೆಳಗೆ

ಹೂವ ತರುವ ಮನೆಗೆ ದೇವ ಹುಲ್ಲು ಹೊರುವ

ಹದ ಬಂದಾಗ ಅರಗಬೇಕು ಬೆದೆ ಬಂದಾಗ ಬಿತ್ತಬೇಕು

ಮನಸಿದ್ದರೆ ಮಾರ್ಗ.

ಹನುಮಂತರಾಯ ಹಗ್ಗ ತಿನ್ನುವಾಗ ಪೂಜಾರಿ ಶಾವಿಗೆ ಬೇಡಿದನಂತೆ

ದಾನವಾಗಿ ಸಿಕ್ಕಿದರೆ, ನನಗೆ ಒಂದಿರಲಿ ನಮ್ಮಪ್ಪನಿಗೆ ಒಂದಿರಲಿ

ಕಿಡಿಯಿಂದ ಕಾಡ ಸುಡ ಬಹುದು

ತೂಕ ಸರಿಯಿದ್ದರೆ ವ್ಯಾಪಾರ.

| | |
|---|---|
| **Download**: Kannadapdf.com | https://kannadapdf.com/ |

ತಡವಿದರೆ ಮಡಿ ಸಹಾ ಕೆಡುವುದು

ತಾಯಿ ಬೇಕು ಇಲ್ಲವೆ ಬಾಯಿ ಬೇಕು

ಶುಭ ನುಡಿಯೋ ಸೋಮ ಅಂದರೆ ಗೂಬೆ ಕಾಣ್ತಿದ್ಯಲ್ಲೋ ಮಾಮ ಅಂದ ಹಾಗೆ.

ಹೊಟ್ಟೆ ಉರಿದು ಕೊಳ್ಳೋದು ಒಂದೇಯ, ಹೊಟ್ಟೆ ಇರಿದು ಕೊಳ್ಳೋದು ಒಂದೇಯ

ಉಣ್ಣು ಬಾ ಅಂದ್ರೆ,ಇರಿ ಬಾ ಅಂದ್ರಂತೆ

ಸಂದೀಲಿ ಸಮಾರಾಧನೆ ಮಾಡ್ದಂಗೆ

ಲಂಚ ಕೊಟ್ಟು ಮಂಚ ಏರು ವಂಚನೆ ಮಾಡಿ ಕೈಲಾಸ ಏರು

ಬಲ್ಲವರಿಗೆ ಅದೇ ಸಮ್ಮತ

ಹೊಟ್ಟೆಗೆ ಹಿಟ್ಟಿಲ್ಲದಿದ್ದರೂ ಜುಟ್ಟಿಗೆ ಮಲ್ಲಿಗೆ ಹೂವು

ತಬ್ಬಲಿಯಾದವನು ಬೊಬ್ಬೆ ಹಾಕಿ ಹೆಬ್ಬುಲಿಯ ಓಡಿಸ್ಯಾನೆ?

ಮಕ್ಕಳ ಬಾಯಿಗೆ ಹಣ್ಣು ಕೊಟ್ಟು ಮಣ್ಣು ಬಿಡಿಸು.

ಸ್ವಾತಿ ಮಳೆ ಮುತ್ತಿನ ಬೆಳೆ.

ಯೋಗಿಗೆ ರಾಗ ಇರಬಾರದು ಭೋಗಿಗೆ ರೋಗ ಇರಬಾರದು

ಇರುವೆಗೆ ಇರುವೆ ಮೈ ಭಾರ, ಆನೆಗೆ ಆನೆ ಮೈ ಭಾರ

ಅಳಿಲ ಸೇವೆ, ಮಳಲ ಭಕ್ತಿ

ತವರೂರಿನ ದಾರೀಲಿ ಕಲ್ಲಿಲ್ಲ ಮುಳ್ಳಿಲ್ಲ

ದೀಪಕ್ಕೆ ಎಣ್ಣೆಯ ಹುಯ್ಯ್ ಅಂತ ಸುರಿಯುತ್ತಾರೇ

ಕಡಗ ನೋಡಲಿ ಅಂತ ಗುಡಿಸಲು ಸುಟ್ಕೊಂಡ ಹಾಗೆ.

ಪಾಪ ಅಂದ್ರೆ ಕರ್ಮ ಬರ್ತದೆ

ಪಾಪ ಅನ್ನೋದಕ್ಕೆ ಕೋಪವೇ ನೆಲೆಗಟ್ಟು

| | |
|---|---|
| **Download**: Kannadapdf.com | https://kannadapdf.com/ |

# 1000 ಕನ್ನಡ ಗಾದೆಗಳು Pdf - KannadaPdf.com

ಕಾಸಿದ್ರೆ ಕೈಲಾಸ

ಯಾರ ಹೆಂಡ್ತಿ ಎಲ್ಲಿಯಾದರೂ ಹೋಗಲಿ ನಮ್ಮ ಹೆಂಡ್ತಿ ನಮ್ಮನೇಲಿರಲಿ

ಹಿರಿಯರ ಮಾತಿಗೆ ಕಿವಿಗೊಡು, ಚುಚ್ಚುಮಾತಿಗೆ ಬೆನ್ನು ಕೊಡು.

ತಾನು ಗರತಿ ಆದರೆ ಸೂಳೆಗೇರೀಲಿ ಮನೆ ಕಟ್ಟು

ಇಲ್ಲದ ಕಾಲಕ್ಕೆ ಕಲ್ಲೆದೆ ಬೇಕು

ಸುಂದರ ಪುರುಷನೆಲ್ಲೆ ಸುಪಣಾತಿ ಅಂದ್ರೆ ಸೂಳೆ ಮನೇಲಿ ಸುಖನಿದ್ರೇಲವ್ರೆ ಎಂದಳು.

ಮುಸುಕಿನೊಳಗೆ ಗುದ್ದಿಸಿಕೊಂಡಂತೆ.

ನಾಲಿಗೆಯಿಂದ ಕೆಳಗೆ ಬಿದ್ದರೆ ನರಕ.

ಎಲ್ಲಾ ಬಣ್ಣ ಮಸಿ ನುಂಗಿತು

ಉತ್ತಮನು ಎತ್ತ ಹೋದರೂ ಶುಭವೇ

ಮದುವೇಲಿ ಗಂಡು, ಸ್ಮಶಾನ ಯಾತ್ರೇಲಿ ಹೆಣವಾಗೋ ಬಯಕೆ

ಅಪ್ಪ ಗುಡಿ ಕಟ್ಟಿದರೆ ಮಗ ಕಳಸ ಇಟ್ಟ

ತಪಸ್ಸು ಇದ್ದವನೇ ಗಭಸ್ತಿ

ತರತರವಾಗಿ ಹೇಳಿದ್ದು ಮರೆತರೆ ಮರಕ್ಕಿಂತಾ ಕಡೆ

ಹೆಣ್ಣಿಗೆ ಹಟವಿರಬಾರದು, ಗಂಡಿಗೆ ಚಟವಿರಬಾರದು.

ಬಾಯಲ್ಲಿ ಬಸಪ್ಪ ಹೊಟ್ಟೆಯಲ್ಲಿ ವಿಷಪ್ಪ

ವಿದ್ಯೆ ಬಲ್ಲವ ಇದ್ದಲ್ಲು ಸಲ್ಲುವ ಹೋಗಿದ್ದಲ್ಲು ಸಲ್ಲುವ

ಅಂಕೆ ಇಲ್ಲದ ಚತುರೆ, ಲಗಾಮು ಇಲ್ಲದ ಕುದುರೆ

ಗಾಳಿ ಬಂದಾಗ ತೂರಿಕೋ

ಇದ್ದವರು ಇದ್ದಹಾಗೆ ಸಿದ್ಧಾ ದೇವಿಗೆ ಸಿಡಿಲು ಬಡೀತು

| | |
|---|---|
| **Download**: Kannadapdf.com | https://kannadapdf.com/ |

ಸಮುದ್ರದ ನೆಂಟಸ್ತನ ಉಪ್ಪಿಗೆ ಬಡತನ

ಬಚ್ಚಿಟ್ಟ ಆಸ್ತಿ ಹೊಂಚುತ್ತಿದ್ದವರ ಪಾಲಾಯ್ತು

ಹೆತ್ತ ಅಮ್ಮನ್ನ ತಿನ್ನೋಳು ಅತ್ತೆಯಮ್ಮನ್ನ ಬಿಟ್ಟಾಳ

ಆಡು ಮುಟ್ಟದ ಸೊಪ್ಪಿಲ್ಲ

ಮೆತ್ತಗಿದ್ದವರನ್ನು ಮೊಣಕೈಯಲ್ಲಿ ಗುದ್ದಿದರು

ಕೊಡುವವರದು ಕೊಟ್ಟರೆ ನನಗೇನು ಉಳಿಯಿತು ಅಂದನಂತೆ.

ಹೂವಿನಿಂದ ನಾರಿಗೂ ಸ್ವರ್ಗ

ನಾಯಿ ಬಾಲಕ್ಕೆ ದೆಬ್ಬೆ ಕಟ್ಟಿದ ಹಾಗೆ

ಹಣ ಎರವಲು ತಂದು ಮಣ ಉರುವಲು ಕೊಂಡ

ಇಲಿ ಬಂತು ಎಂದರೆ ಹುಲಿ ಬಂತು ಎಂದರು

ಮೊದಲು ಕಣ್ಣು ಬಿಡು, ನಂತರ ಕೈ ಮಾಡು.

ಆಳಾಗದವ ಅರಸನಲ್ಲ, ಹಟ ಹಿಡಿದವ ಸಾಮ್ರಾಟನಲ್ಲ.

ತಲೇ ಕೂದಲಿದ್ದರೆ ಎತ್ತ ಬೇಕಾದರು ತುರುಬು ಹಾಕಿಕೊಳ್ಳಬಹುದು

ಕಿಡಿ ಸಣ್ಣದಾದರೂ ಕಾಡೆಲ್ಲವನ್ನು ಸುಡುತ್ತದೆ.

ಹಾಲಿಲ್ಲ ಬಟ್ಟಲಿಲ್ಲ ಗುಟುಕ್ ಅಂದ

ಚೆಂದುಳ್ಳಿ ಹೆಣ್ಣಿಗೆ ಓಡವ್ಯಾಕೆ, ಹೊಸ ರಾಗಿ ಹಿಟ್ಟಿಗೆ ಎಸರ್ಯಾಕೆ?

ಜೇನ ಗಳಿಸಿದ ;ಜಾಣ ತಿಂದ

ಚೊಗಟಗಾತಿ ಮನೆ ಚೆಗಟ ಮೂಗಂಡುಗ.

ಆಡೋಣ ಬಾ ಕೆಡಿಸೋಣ ಬಾ

ತಾಮ್ರದ ನಾಣ್ಯ ತಾಯಿ ಮಕ್ಕಳನ್ನ ಕೆಡಿಸ್ತು

| | |
|---|---|
| **Download**: Kannadapdf.com | https://kannadapdf.com/ |

ಕೈಲಾಗದೋನು ಮೈ ಪರಚಿಕೊಂಡ

ಹಗೆ ಮಾತು ಆತುಕೊಂಡ, ತುಟಿ ಬಿಚ್ಚದೆ ಕೂತುಕೊಂಡ

ಎತ್ತು ಈಯಿತು ಅನ್ದರೆ ಕೊಟ್ಟಿಗೆಗೆ ಕಟ್ಟು ಎನ್ದರಂತೆ

ತಾನುಂಟೋ? ಮೂರು ಲೋಕವುಂಟೋ?

ಪೇಚಾಟದಲ್ಲಿ ಬಿದ್ದವನಿಗೆ ಪೀಕಲಾಟವೇ ಗತಿ.

ಸಿರಿ ಸೋಂಕಿದವರ ಪರಿ ಬೇರೆ

ರಸ ಬೆಳೆದು ಕಸ ತಿನ್ನಬೇಡ,

ಮಾತಿಗೆ ಸಾಯದೇ ಇದ್ದೋನೂ ಏಟಿಗೂ ಸಾಯುವುದಿಲ್ಲ.

ಶರೀರಕ್ಕೆ ಸುಖ, ಹೊಟ್ಟೆಗೆ ದುಃಖ.

ಹಣ ಇದ್ದವನ ಕೈ ಹಿಡಿದರೂ ಋಣ ಇದ್ದಷ್ಟೇ ಸಿಕ್ಕುವುದು.

ಆಪತ್ತಿಗಾದವನೇ ನೆಂಟ

ಮೂರೂ ಬಿಟ್ಟೋಳು ಊರಿಗೆ ದೊಡ್ಡೋಳು

ಎಡದ ನೆತ್ತಿಗೆ ಬಡಿದರೆ ಬಲದ ನೆತ್ತಿಗೆ ತಾಕಿತು

ಹತ್ತಿರಕ್ಕೆ ಬಂದರೆ ಹಡಿಕ್ ನಾತ

ಮಾರಿ ಕಣ್ಣು ಹೋರಿ ಮ್ಯಾಲೆ, ಕಟುಕನ್ ಕಣ್ಣು ಕುರಿ ಮ್ಯಾಲೆ.

ಅತ್ತೆ ಆಸ್ತೀನ ಅಳಿಯ ದಾನ ಮಾಡಿದ

ಊರು ದೂರಾಯಿತು ಕಾಡು ಹತ್ತರಾಯಿತು

ಹಾಕ್ಮಣೆ, ನೂಕ್ಮಣೆ, ಯಾಕ್ಮಣೆ

ರಾಗಿ ಇದ್ರೆ ರಾಗ ರಾಗಿ ಇಲ್ದಿದ್ರೆ ರೋಗ

ಹಾವೂ ಸಾಯಬೇಕು, ಕೋಲೂ ಮುರಿಯಬಾರದು.



| | |
|---|---|
| **Download**: Kannadapdf.com | https://kannadapdf.com/ |

ಎತ್ತಿಗೆ ಜ್ವರ ಬಂದ್ರೆ, ಎಮ್ಮೆಗೆ ಬರೆ ಎಳೆದರಂತೆ

ಚೆಲ್‌ಮುಂಡೆ ಗಂಡನ ಮದ್ವೆಗೋದ್ಲು.

ಮನೇಗೆ ಬೆಂಕಿ ಬಿದ್ದಾಗ ಭಾವಿ ತೋಡಕ್ಕೆ ಶುರು ಮಾಡಿದರಂತೆ

ಚಂದ ನೋಡಿ ತಂದ್ರಂತೆ, ಚಾಳಿ ನೋಡಿ ಬಿಟ್ರಂತೆ.

ಯಾವ ಕಾಲ ತಪ್ಪಿದರೂ ಸಾವು ಕಾಲ ತಪ್ಪದು

ತಗಲುಗಾರನಿಗೆ ಬಗಲ ಮೇಲೆ ಜ್ಞಾ ನ

ಹಸಿದು ಹಲಸಿನ ಹಣ್ಣು ತಿನ್ನು ಉಂಡು ಮಾವಿನ ಹಣ್ಣು ತಿನ್ನು

ಹೋಗುವುದು ಮೂಡಿದ ಹೊತ್ತು, ಹೋಗೋದಿಲ್ಲ ಆಡಿದ ಮಾತು.

ಗೆದ್ದವ ಸತ್ತ ಸೋತವ ಸತ್ತ

ಕಂಡವರ ಮನೇಲಿ ನೋಡು ನನ್ನ ಕೈ ಧಾರಾಳವ!

ಮುದಿ … ಮಹಾ ಪತಿವ್ರತೆ (ವೃದ್ಧ ನಾರೀ ಪತಿವ್ರತಾ)

ತನಗೇ ಇಲ್ಲದವ ಪರರಿಗೆ/ಮಂದಿಗೆ ಏನು ಕೊಟ್ಟಾನು

ಆಪತ್ತಿಗೆ ಹರಕೆ, ಸಂಪತ್ತಿಗೆ ಮರವು

ಸಂತೇಲಿ ಮನೇ ಮಾಡಿ ಸದ್ದಿಗಂಜೂದೇ

ಗಂಡಸರ ಕೈಯಲ್ಲಿ ಕೂಸು ನಿಲ್ಲದು ಹೆಂಗಸರ ಕೈಯಲ್ಲಿ ಮಾತು ನಿಲ್ಲದು

ಕಡಲಲ್ಲಿ ಪುಟಿದ ತೆರೆ ಕಡಲಲ್ಲೇ ಕರಗಿ ಹೋಯ್ತು

ಎಲ್ಲರ ಹಲ್ಲೊಳಗೆ ನುರಿದು ಹೋಗೋದಕ್ಕಿಂತ ಒಣಗಿದ ಹುಲ್ಲೊಳಗೆ ಉರಿದು ಹೋಗೋದು ವಾಸಿ

ಅಜ್ಜಿಗೆ ಅರಿವೆಯ ಚಿಂತೆ, ಮಗಳಿಗೆ ಗಂಡನ ಚಿಂತೆ, ಮೊಮ್ಮಗಳಿಗೆ ಕಜ್ಜಾಯದ ಚಿಂತೆ

ಕಳ್ಳನ ಹೆಜ್ಜೆ ಕಳ್ಳನೇ ಬಲ್ಲ

ಎಲ್ಲಮ್ಮನ ಗುಡ್ಡದಾಗ ಮುಲ್ಲಾಂದೇನು

| | |
|---|---|
| **Download**: Kannadapdf.com | https://kannadapdf.com/ |

ತರುಬಿಲ್ಲದ ಒಡ್ಡನು, ಬಿರಿಸಿಲ್ಲದ ಹುರಿಯು

ತುಂಬಿದ ಕೊಡ ತುಳುಕುವುದಿಲ್ಲ

ಆಸೆ ಆಕಾಶದಷ್ಟು, ಸಾಧನೆ ಸಾಸಿವೆಯಷ್ಟೇ.

ಗಂಡಸು ಕೂತು ಕೆಟ್ಟ ;ಹೆಂಗಸು ತಿರುಗಿ ಕೆಟ್ಟಳು

ಗಾಜಿನ ಮನೇಲಿರೋವ್ರು ಅಕ್ಕಪಕ್ಕದ ಮನೇ ಮೇಲೆ ಕಲ್ಲೆಸೆಯಬಾರದು

ರಂಗನ ಮುಂದೆ ಸಿಂಗನೆ ? ಸಿಂಗನ ಮುಂದೆ ಮಂಗನೆ ?

ಆಳಾಗಬಲ್ಲವನು ಅರಸನಾಗಬಲ್ಲ.

ಹಾಳೂರಿಗೆ ಉಳಿದವನೇ ಗೌಡ

ಮನೇಲಿ ಇಲಿ,ಬೀದೀಲಿ ಹುಲಿ

| | |
|---|---|
| **Download**: Kannadapdf.com | https://kannadapdf.com/ |